ಗುರುವಾರ, 25.12.2025
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 111
Digital Varthe Kannada Daily
Volume 01 - Issue 111
Thursday 25.12.2025
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ

ಕನ್ನಡ ದಿನಪತ್ರಿಕೆ

DIGITAL VARTHE
digitalvarthe@gmail.com
www.digitalvarthe.com

## ಕಾರು ಪಲ್ಟಿಯಾಗಿ ಒಂದೇ ಕುಟುಂಬದ ಮೂವರು ಬಲಿ



**ಬಳ್ಳಾರಿ**: ಚಾಲಕನ ನಿಯಂತ್ರಣ ತಪ್ಪಿದ ಕಾರು ರಸ್ತೆಯಲ್ಲೇ ಪಲ್ಟಿಯಾದ ಪರಿಣಾಮ, ಒಂದೇ ಕುಟುಂಬದ ಮೂವರು ಸದಸ್ಯರು ಸ್ಥಳದಲ್ಲೇ ಮೃತಪಟ್ಟಿರುವ ಹೃದಯವಿದ್ರಾವಕ ಘಟನೆ ಬಳ್ಳಾರಿ-ಸಿರುಗುಪ್ಪ ರಾಜ್ಯ ಹೆದ್ದಾರಿಯ ದೇವಿನಗರ ಕ್ಯಾಂಪ್ ಬಳಿ ನಡೆದಿದೆ. ಬಳ್ಳಾರಿ ಜಿಲ್ಲೆಯ ಸಿರುಗುಪ್ಪ ತಾಲ್ಲೂಕಿನ ನಿಟ್ಟೂರು ಗ್ರಾಮದ ನಿವಾಸಿ ಪ್ರಸಾದ್ ರಾವ್ ಅವರ ಕುಟುಂಬವು ತಮಿಳುನಾಡಿನ ಪ್ರಸಿದ್ಧ ದೇವಸ್ಥಾನಕ್ಕೆ ಭೇಟಿ ನೀಡಲು ತೆರಳಿತ್ತು. ದರ್ಶನ ಮುಗಿಸಿ ಸಂಸಾರ ಸಮೇತರಾಗಿ ಮರಳುತ್ತಿದ್ದಾಗ ಈ ದುರ್ಘಟನೆ ಸಂಭವಿಸಿದೆ. ಕಾರಿನಲ್ಲಿ ಒಟ್ಟು ಐವರು ಪ್ರಯಾಣಿಸುತ್ತಿದ್ದರು.

ದೇವಿನಗರ ಕ್ಯಾಂಪ್ ಸಮೀಪ ಬರುತ್ತಿದ್ದಂತೆ ಕಾರು ಚಾಲಕನ ನಿಯಂತ್ರಣ ತಪ್ಪಿ ರಸ್ತೆಯ ಪಕ್ಕಕ್ಕೆ ಪಲ್ಟಿಯಾಗಿದೆ. ಅಪಘಾತದ ತೀವ್ರತೆಗೆ ಕಾರು ಸಂಪೂರ್ಣವಾಗಿ ನಜ್ಜುಗುಜ್ಜಾಗಿದ್ದು, ಪ್ರಸಾದ್ ರಾವ್ ಸೇರಿದಂತೆ ಇಬ್ಬರು ಮಹಿಳೆಯರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಉಳಿದ ಇಬ್ಬರು ಪ್ರಯಾಣಿಕರು ಗಂಭೀರವಾಗಿ ಗಾಯಗೊಂಡಿದ್ದು, ಅವರನ್ನು ಕೂಡಲೇ ಹತ್ತಿರದ ಆಸ್ಪತ್ರೆಗೆ ದಾಖಲಿಸಲಾಗಿದೆ. ಸದ್ಯ ಗಾಯಾಳುಗಳ ಸ್ಥಿತಿ ಚಿಂತಾಜನಕವಾಗಿದೆ ಎಂದು ವೈದ್ಯಕೀಯ ಮೂಲಗಳು ತಿಳಿಸಿವೆ.

ಹಾ ಸ ನ ಜಿಲ್ಲೆಯಲ್ಲಿ ಶಿಕ್ಷಣ ಪಡೆಯಬೇಕಿದ್ದ ಅಪ್ರಾಪ್ತ ಬಾಲಕಿಯೊಬ್ಬಳು ಕಾಮುಕನ ಅಟ್ಟಹಾಸಕ್ಕೆ ಸಿಲುಕಿ ತಾಯಿಯಾಗಿರುವ ದಾರುಣ ಘಟನೆ ನಡೆದಿದೆ. ಹಾಸನ ಜಿಲ್ಲೆಯ ಖಾಸಗಿ ಶಾಲೆಯೊಂದರಲ್ಲಿ 10ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿದ್ದ ಅಪ್ರಾಪ್ತ ವಿದ್ಯಾರ್ಥಿನಿಯ ಮೇಲೆ ಅದೇ ಶಾಲೆಯ ವಾಹನ ಚಾಲಕ ರಂಜಿತ್ ಎಂಬಾತ ಕಳೆದ 8 ತಿಂಗಳಿನಿಂದ ಲೈಂಗಿಕ ದೌರ್ಜನ್ಯ ಎಸಗಿದ್ದಾನೆ. ಬಾಲಕಿಗೆ ಪ್ರತಿದಿನ ಚಾಕೊಲೇಟ್ ನೀಡಿ ಆಮಿಷವೊಡ್ಡಿ ತನ್ನ ಕಾಮದ ಹಸಿವನ್ನು ನೀಗಿಸಿಕೊಂಡಿದ್ದಾನೆ. ಈ ಪೈಶಾಚಿಕ ಕೃತ್ಯದಿಂದ ಬಾಲಕಿ ಗರ್ಭಿಣಿಯಾಗಿದ್ದು, ಇದೀಗ ಗಂಡು ಮಗುವಿಗೆ ಜನ್ಮ ನೀಡಿದ್ದಾಳೆ.

ವಿಷಯ ತಿಳಿಯುತ್ತಿದ್ದಂತೆ ಕಾರ್ಯಾಚರಣೆ ನಡೆಸಿದ ಚನ್ನರಾಯಪಟ್ಟಣ ನಗರ ಠಾಣೆಯ ಪೊಲೀಸರು ಆರೋಪಿ ರಂಜಿತ್‌ನನ್ನು ಬಂಧಿಸಿ ಪೋಕ್ಸೋ ಕಾಯ್ದೆಯಡಿ ಪ್ರಕರಣ ದಾಖಲಿಸಿದ್ದಾರೆ. ಸದ್ಯ ಬಾಲಕಿ ಮತ್ತು ಮಗು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದು, ಇಬ್ಬರನ್ನೂ ಶೀಘ್ರದಲ್ಲೇ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಸಾಂತ್ವನ ಕೇಂದ್ರಕ್ಕೆ ಕಳುಹಿಸಲಾಗುವುದು ಎಂದು ಹಾಸನ ಡಿಹೆಚ್‌ಒ ಅನಿಲ್ ತಿಳಿಸಿದ್ದಾರೆ.

ಪ್ರಾಥಮಿಕ ವರದಿಗಳ ಪ್ರಕಾರ, ಈ ಅಪಘಾತವು ಬೆಳಗಿನ ಜಾವ ಸಂಭವಿಸಿದೆ. ದೀರ್ಘ ಪ್ರಯಾಣದ ಆಯಾಸ ಮತ್ತು ಬೆಳಗಿನ ಜಾವದ ನಿದ್ದೆಯ ಮಂಪರಿನಲ್ಲಿ ಚಾಲಕನಿಗೆ ರಸ್ತೆಯ ಮೇಲೆ ಹತೋಟಿ ತಪ್ಪಿರಬಹುದು ಎಂಬ ಶಂಕೆ ವ್ಯಕ್ತವಾಗಿದೆ. ಅಪಘಾತದ ಸುದ್ದಿ ತಿಳಿಯುತ್ತಿದ್ದಂತೆ ಸಿರುಗುಪ್ಪ ಠಾಣೆಯ ಪೊಲೀಸರು ಸ್ಥಳಕ್ಕೆ ಧಾವಿಸಿ ಪರಿಶೀಲನೆ ನಡೆಸಿದ್ದಾರೆ. ಮೃತದೇಹಗಳನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಗಿದ್ದು, ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಳ್ಳಲಾಗಿದೆ.

## ಮಗಳ ಮದುವೆ ನಿರಾಕರಣೆಗೆ ಪ್ರತೀಕಾರ: ತಾಯಿಯ ಮೇಲೆ ಬೆಂಕಿ ದಾಳಿ

**ಬೆಂಗಳೂರು**: ತನ್ನ ಮಗಳನ್ನು ಮದುವೆ ಮಾಡಿಕೊಡಲು ನಿರಾಕರಿಸಿದ ಎಂಬ ಒಂದೇ ಕಾರಣಕ್ಕೆ, ಮಹಿಳೆಯ ಮೇಲೆ ಪೆಟ್ರೋಲ್ ಸುರಿದು ಬೆಂಕಿ ಹಚ್ಚಿ ಕೊಲೆಗೆ ಯತ್ನಿಸಿರುವ ಭೀಕರ ಘಟನೆ ನಗರದ ಭೋವಿ ಕಾಲೋನಿಯಲ್ಲಿ ಜರುಗಿದೆ.




ಗಾಯಗೊಂಡ ಮಹಿಳೆಯನ್ನು 40 ವರ್ಷದ ಗೀತಾ ಎಂದು ಗುರುತಿಸಲಾಗಿದ್ದು, ಅವರು ಬಸವೇಶ್ವರನಗರದ ಭೋವಿ ಕಾಲೋನಿಯಲ್ಲಿ ಸಣ್ಣದೊಂದು ಪ್ರಾವಿಷನ್ ಸ್ಟೋರ್ ನಡೆಸುತ್ತಿದ್ದರು. ಈ ಕೃತ್ಯ ಎಸಗಿದ ಆರೋಪಿಯನ್ನು ಮುತ್ತು ಎಂದು ಗುರುತಿಸಲಾಗಿದೆ.

ಆರೋಪಿ ಮುತ್ತು ಅದೇ ಪ್ರದೇಶದಲ್ಲಿ ಟೀ ಸ್ಟಾಲ್ ಇಟ್ಟುಕೊಂಡಿದ್ದ ಎನ್ನಲಾಗಿದ್ದು, ಈ ವೇಳೆ ಗೀತಾ ಅವರ ಕುಟುಂಬದೊಂದಿಗೆ ಪರಿಚಯ ಬೆಳೆಸಿಕೊಂಡಿದ್ದ. ಪೊಲೀಸ್ ಮೂಲಗಳ ಪ್ರಕಾರ, ಮುತ್ತು ಮತ್ತು ಗೀತಾ ಅವರ ಕುಟುಂಬದ ನಡುವೆ ಆತ್ಮೀಯತೆ ಬೆಳೆದಿತ್ತು. ಗೀತಾ, ಆಕೆಯ 19 ವರ್ಷದ ಮಗಳು ಹಾಗೂ ಆರೋಪಿ ಮುತ್ತು ಮೂವರೂ ಒಂದೇ ಮನೆಯಲ್ಲಿ ವಾಸವಿದ್ದರು ಎಂದು ತಿಳಿದುಬಂದಿದೆ. ಆದರೆ ಕೆಲ ದಿನಗಲ ಬಳಿಕ ಮುತ್ತು, ಗೀತಾ ಅವರ 19 ವರ್ಷದ ಮಗಳನ್ನು ಮದುವೆ ಮಾಡಿಕೊಡುವಂತೆ ನಿರಂತರವಾಗಿ ಒತ್ತಡ ಹೇರುತ್ತಿದ್ದ. ಗೀತಾ ಮುತ್ತುನ ಮದುವೆ ಪ್ರಸ್ತಾಪವನ್ನು ತಿರಸ್ಕರಿಸಿದ್ದರು.

ಇದರಿಂದ ಕೆರಳಿದ ಮುತ್ತು, ಬುಧವಾರದಂದು ಗೀತಾ ಅವರ ಮೇಲೆ ಪೆಟ್ರೋಲ್ ಸುರಿದು ಬೆಂಕಿ ಹಚ್ಚಿದ್ದಾನೆ. ಈ ವೇಳೆ ಗೀತಾ ಜೋರಾಗಿ ಚೀರಿದ್ದಾಳೆ ಬಳಿಕ ನೆರೆಹೊರೆಯವರು ಸಳಕ್ಕೆ ಬರುವಷ್ಟರಲ್ಲಿ ಆರೋಪಿ ಮುತ್ತು ಪರಾರಿಗಾಗಿದ್ದಾನೆ. ತೀವ್ರವಾಗಿ ಗಾಯಗೊಂಡಿರುವ ಗೀತಾಳನ್ನ ತಕ್ಷಣವೇ ನಗರದ ವಿಕ್ಟೋರಿಯಾ ಆಸ್ಪತ್ರೆಗೆ ದಾಖಲಿಸಲಾಗಿದೆ. ಅವರ ಸ್ಥಿತಿ ಚಿಂತಾಜನಕವಾಗಿದೆ ಎಂದು ವೈದ್ಯರು ತಿಳಿಸಿದ್ದಾರೆ. ಘಟನೆ ಸಂಬಂಧ ಬಸವೇಶ್ವರನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ಆರೋಪಿಗಾಗಿ ಬಲೆ ಬೀಸಿದ್ದಾರೆ.

## ಕೊಲೆ ಆರೋಪ ಸಾಬೀತಾದರೂ ಮಹಿಳೆ ಅಪರಾಧಮುಕ್ತ ಮಂಗಳೂರಲ್ಲಿ ಅಚ್ಚರಿ ತೀರ್ಪು

**ಮಂಗಳೂರು**: ಆಕೆ ಪತಿಯನ್ನೇ ಕೊಲೆ ಮಾಡಿದಾಕೆ. ಸಾಲದೆಂಬಂತೆ ನ್ಯಾಯಾಲಯದಲ್ಲೂ ಆರೋಪ ಸಾಬೀತಾಗಿದೆ. ಇಷ್ಟಾದರೂ ಆಕೆಗೆ ಕೋರ್ಟ್ ಶಿಕ್ಷೆ ವಿಧಿಸಿಲ್ಲ! ಅಷ್ಟೇ ಅಲ್ಲ, ಆಕೆಯನ್ನು ಅಪರಾಧಮುಕ್ತಗೊಳಿಸಿದೆ! ಹಾಗೆಂದು ಆಕೆ ಮನೆಗೆ ಮರಳುವಂತೆಯೂ ಇಲ್ಲ. ಮತ್ತೆಲ್ಲಿಗೆ ಕಳುಹಿಸುತ್ತಾರೆ? ಇದು ಹೇಗೆ ಸಾಧ್ಯ ಎಂಬೆಲ್ಲ ಪ್ರಶ್ನೆಗಳು ಮೂಡುವುದು ಸಹಜ. ಆಶ್ಚರ್ಯ ಆದರೂ ಇದು ಸತ್ಯ. ದಕ್ಷಿಣ ಕನ್ನಡ ಜಿಲ್ಲೆಯ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಈ ವಿಶೇಷ ತೀರ್ಪು ನೀಡಿದೆ ಇದು ಬೆಳ್ತಂಗಡಿ ತಾಲೂಕಿನ ನಾವೂರು ಗ್ರಾಮದಲ್ಲಿ 2022ರ ಜುಲೈ 5 ರಂದು ನಡೆದಿದ್ದ ಕೊಲೆ ಪ್ರಕರಣ. ಯೋಹಾನನ್ ಎಂಬುವವರನ್ನು ಅವರ ಪತ್ನಿ ಎಲಿಯಮ್ಮ ಕತ್ತಿಯಿಂದ ಕಡಿದು ಕೊಲೆ ಮಾಡಿದ್ದರು. ಪ್ರಕರಣದ ವಿಚಾರಣೆ ವೇಳೆ ಬೆಳ್ತಂಗಡಿ ಪೊಲೀಸರು ಆರೋಪಿ ಎಲಿಯಮ್ಮ ಬಂಧಿಸಿದ್ದರು.



ತಪ್ಪೊಪ್ಪಿಕೊಂಡಿದ್ದ ಆರೋಪಿ ಎಲಿಯಮ್ಮ ಬೆಳ್ತಂಗಡಿ ಪೊಲೀಸರ ವಿಚಾರಣೆ ವೇಳೆ ಆರೋಪಿ ಎಲಿಯಮ್ಮ 'ಪತಿಯನ್ನು ಕೊಲೆ ಮಾಡಿರುವುದು ಹೌದು' ಎಂದು ಒಪ್ಪಿಕೊಂಡಿದ್ದರು. ಹೀಗಾಗಿ ಕೃತ್ಯದ ಗಂಭೀರತೆಯನ್ನು ಪರಿಗಣಿಸಿ ನ್ಯಾಯಾಲಯ ಸಾಕ್ಷಿ ವಿಚಾರಣೆಯನ್ನು ಮುಂದುವರೆಸಿತ್ತು. ಸಾಕ್ಷಿದಾರರು ಕೂಡ ಆಕೆಯ ವಿರುದ್ಧ ಸಾಕ್ಷಿ ನುಡಿದಿದ್ದರು.
ಕೊಲೆ ಪ್ರಕರಣದ ವಿಚಾರಣೆಯ ಕ್ರಾಸ್ ಎಕ್ಸಾಮಿನೇಷನ್ ಹಂತದಲ್ಲಿ ಆರೋಪಿ ಪರ ವಕೀಲ ವಿಕ್ರಮ್ ರಾಜ್ ಎ. ವಾದ ಮಂಡಿಸಿದ್ದರು. ಎಲಿಯಮ್ಮ ದೀರ್ಘಕಾಲದಿಂದ ಮಾನಸಿಕ ಅಸ್ವಸ್ಥತೆ ಮತ್ತು ಭ್ರಮೆಗಳಿಂದ ಬಳಲುತ್ತಿದ್ದಾರೆ. ಮಾನಸಿಕ ಅಸ್ವಸ್ಥತೆಯ ಕಾರಣದಿಂದಾಗಿ ಕೃತ್ಯವು ತಪ್ಪು ಅಥವಾ ಕಾನೂನು ಬಾಹಿರ ಎಂದು ತಿಳಿಯುವ ಸ್ಥಿತಿಯಲ್ಲಿ ಆರೋಪಿ ಇರಲಿಲ್ಲ.

ಆದ್ದರಿಂದ ಆಕೆ ಅಪರಾಧ ಎಸಗಿಲ್ಲ ಎಂದು ವಿಕ್ರಮ್ ರಾಜ್ ಎ ವಾದ ಮಂಡಿಸಿದ್ದರು. ಅಚ್ಚರಿಯ ತೀರ್ಪು ಪ್ರಕಟಿಸಿ ಕೋರ್ಟ್ ಹೇಳಿದ್ದೇನು ವಾದ-ಪ್ರತಿವಾದಗಳನ್ನು ಆಲಿಸಿ ನ್ಯಾಯಾಧೀಶರಾದ ಮೋಹನ ಜೆ.ಎಸ್. ತೀರ್ಪು ನೀಡಿದ್ದು, ಕೊಲೆ ಕೃತ್ಯ ಸಾಬೀತಾಗಿದ್ದರೂ ಆರೋಪಿ ಅಪರಾಧಿಕ ಹೊಣೆಯಿಂದ ಮುಕ್ತ ಎಂದು ಹೇಳಿದ್ದಾರೆ.

ನಂತರ ಆರೋಪಿಯನ್ನು ನಿಮ್ಹಾನ್ಸ್‌ಗೆ ಕಳುಹಿಸಲು ಜೈಲು ಅಧೀಕ್ಷಕರಿಗೆ ಆದೇಶ ನೀಡಿದ್ದಾರೆ. ಆಕೆ ಬಿಡುಗಡೆಗೆ ಯೋಗ್ಯಳೇ ಮತ್ತು ಆಕೆಯಿಂದ ಸಮಾಜಕ್ಕೆ ಅಥವಾ ಆಕೆಯ ಜೀವಕ್ಕೆ ಅಪಾಯವಿದೆಯೇ ಎಂಬ ಬಗ್ಗೆ ವರದಿ ಸಲ್ಲಿಸುವಂತೆ ಕೋರ್ಟ್ ಸೂಚನೆ ನೀಡಿದೆ. ಆರೋಪಿ ಪರ ನ್ಯಾಯವಾದಿಗಳಾದ ವಿಕ್ರಮ್ ರಾಜ್ ಎ ಮತ್ತು ಜೀವನ್ ಎ.ಎಂ. ವಾದ ಮಂಡಿಸಿದ್ದರು.

## ರೈತರಿಗೆ ಕೃಷಿ ಯಂತ್ರೋಪಕರಣ ವಿತರಣೆ: ಧೀರಜ್ ಮುನಿರಾಜು



**ದೊಡ್ಡಬಳ್ಳಾಪು**: ತಾಲ್ಲೂಕಿನ ದೊಡ್ಡಬೆಳವಂಗಲ ಹೋಬಳಿಯ ಕಾರೇಪುರ ಗ್ರಾಮದಲ್ಲಿ ರೈತ ಸಂಘ, ಕೃಷಿ ಇಲಾಖೆ, ಕೃಷಿಕ ಸಮಾಜ, ಹಾಗೂ ವಿವಿಧ ಇಲಾಖೆಗಳ ವತಿಯಿಂದ ರೈತರ ದಿನಾಚರಣೆ ಹಾಗೂ ಸಮಗ್ರ ಕೃಷಿ, ರಾಗಿಯಲ್ಲಿ ಕೊಯ್ಲಿನೋತ್ತರ ತಂತ್ರಜ್ಞಾನಗಳು ಮತ್ತು ಮೌಲ್ಯವರ್ಧನೆ ಕುರಿತು ಒಂದು ದಿನದ ಹೊರಾಂಗಣ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಶಾಸಕ ಧೀರಜ್ ಮುನಿರಾಜು, ಸಹಾಯಕ ಕೃಷಿ ನಿರ್ದೇಶಕರಾದ ಡಾ.ರಾಘವೇಂದ್ರ, ರೈತ ಸಂಘದವರು, ಕೆ.ವಿ.ಕೆ.ವಿಜ್ಞಾನಿಗಳು, ದೊಡ್ಡಬೆಳವಂಗಲ ಗ್ರಾಮ ಪಂಚಾಂಯಿತಿ ಅಧ್ಯಕ್ಷರಾದ ಕಲಾವತಿ ಕೃಷ್ಣಮೂರ್ತಿ, ಗ್ರಾಮ ಪಂಚಾಯಿತಿ ಸದಸ್ಯರು, ವಿವಿಧ ಇಲಾಖೆಗಳ ಸಿಬ್ಬಂದಿ ಹಾಗೂ ಕಾರೆಪುರ ಗ್ರಾಮಸ್ಥರು ಹಾಜರಿದ್ದರು.

ಕಾರ್ಯಕ್ರಮದಲ್ಲಿ ರೈತರಿಗೆ ಶಾಸಕ ಧೀರಜ್ ಮುನಿರಾಜು ಕೃಷಿ ಯಂತ್ರೋಪಕರಣ ಮತ್ತು ತುಂತುರು ನೀರಾವರಿ ಘಟಕಗಳನ್ನು ವಿತರಣೆ ಮಾಡಿದರು. ಕಾರ್ಯಕ್ರಮ ಕುರಿತು ಮಾತನಾಡಿದ ಶಾಸಕ ಧೀರಜ್ ಮುನಿರಾಜು, ದೊಡ್ಡಬಳ್ಳಾಪುರ ತಾಲ್ಲೂಕು ಬೆಂಗಳೂರಿಗೆ ಹತ್ತಿರ ಇರುವುದು ಎಷ್ಟು ವರವೋ ಅಷ್ಟೇ ಶಾಪ ಅನ್ನೋ ರೀತಿ ಇದೆ. ತಾಲ್ಲೂಕಿಗೆ ನಾನಾ ರೀತಿಯ ಯೋಜನೆಗಳು ಬರ್ತಿವೆ ಇದರಿಂದ ಕಷ್ಟ ಆಗೋದು ರೈತರಿಗೆ. ಏಕೆಂದರೆ ಈ ಯೋಜನೆಗಳಿಗಾಗಿ ತಾಲ್ಲೂಕಿನ 12 ಸಾವಿರಕ್ಕೂ ಅಧಿಕ ಎಕರೆ ಭೂಮಿಯನ್ನು KIDB ವಶಪಡಿಸಿಕೊಂಡಿ ಭೂಮಿತಾಯಿಯನ್ನು ನಂಬಿ, ನೇಗಿಲನ್ನು ಹಿಡಿದು ನಮ್ಮೆಲ್ಲರ ಜೀವನವನ್ನು ನಡೆಸಲಿಕ್ಕೆ ಸಹಕಾರ ಕೊಡುತ್ತಿರುವ ರೈತರು ಇಂದು ಸಂಕಷ್ಟದ ಪರಿಸ್ಥಿತಿಯಲ್ಲಿ ಇದ್ದಾರೆ. ಸರ್ಕಾರ ರೈತಪರ ಯೋಜನೆಗಳನ್ನು ತರಬೇಕು, ರೈತರು ಸಂಕಷ್ಟದಿಂದ ಪಾರಾಗಬೇಕು ಎಂದರು.

ಸುದ್ದಿ ಹಾಗೂ ಜಾಹೀರಾತುಗಳಿಗೆ ಸಂಪರ್ಕಿಸಿ
:9538786812/988065534

## ಕಾಣೆಯಾಗಿದ್ದಾರೆ



**ಕೃಷ್ಣರಾಜಪೇಟೆ**: ತಾಲೂಕಿನ ನಾರ್ಗೊನಹಳ್ಳಿ ಗ್ರಾಮದ ಹಿರಿಯ ಮುಖಂಡರಾದ ದೇವನಾಥ (52) 18/12/2025 ಶುಕ್ರವಾರ ಬೆಳಿಗ್ಗೆ ಮನೆಯಿಂದ ಗಾರೆ ಕೆಲಸಕ್ಕೆ ಹೋಗಿ ಬರುತ್ತೇನೆ ಎಂದು ಹೋದವರು ವಾಪಸ್ ಮನೆಗೆ ಬಾರದೆ ಕಾಣೆಯಾ ಗಿದ್ದಾರೆ,

ಈ ಘಟನೆಯ ಸಂಬಂಧ ಪಟ್ಟ ಕೃಷ್ಣರಾಜಪೇಟೆ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದ್ದು, ಕಾಣೆಯಾಗಿರುವ ದೇವನಾಥ ರವರಿಗೆ ಎರಡು ಕಾಲುಗಳಲ್ಲಿ ಹಿಸುಬು ಆಗಿರುತ್ತದೆ, ಸಾಧಾರಣ ಮೈಕಟ್ಟು, ಎಣ್ಣೆಗಂಪು ಬಣ್ಣ, 5 ಎತ್ತರವಿದ್ದಾರೆ. ಕೆಂಪು ಬಣ್ಣದ ಜರ್ಕಿನ್ ಎರಡು ಶಾಲು, ಬ್ರೌನ್ ಮತ್ತು ಬಿಳಿ ಬಣ್ಣದ ಪಂಚೆ, ಕೆಂಪು ಬಣ್ಣದ ಪ್ಯಾಂಟ್ ಧರಿಸಿರುತ್ತಾರೆ. ಈ ಚಹರೆಯುಳ್ಳ ವ್ಯಕ್ತಿಯ ಬಗ್ಗೆ ಮಾಹಿತಿ ದೊರೆತವರು ಕೂಡಲೆ ಈ ಕೆಳಕಂಡ ನಂಬರ್ ಗಳಿಗೆ 7619431325, 8431300240, 93807 63146, ಸಂಪರ್ಕಿಸಿ ಎಂದು ನೀಡಿ ಎಂದು ಕುಟುಂಬದ ಸದಸ್ಯರು ಪತ್ರಿಕಾ ಪ್ರಕಟಣೆಯಲ್ಲಿ ಮನವಿ ಮಾಡಿದ್ದರೆ,

## ಕರ್ನಾಟಕ ಪುರುಷ ಆಯೋಗ ಸ್ಥಾಪನ ಸಮಿತಿಯ – ಪೂರ್ವಭಾವಿ ಸಭೆ




ಬೆಂಗಳೂರು: ಕರ್ನಾಟಕ ರಾಜ್ಯದಲ್ಲಿ ಪುರುಷ ಆಯೋಗ ಸ್ಥಾಪನೆಯ ಅಗತ್ಯತೆಯನ್ನು ಕುರಿತು ಇಂದು ಬೆಂಗಳೂರನಲ್ಲಿ ಪೂರ್ವಭಾವಿ ಸಭೆ ನಡೆಸಲಾಯಿತು. ಈ ಸಭೆಯಲ್ಲಿ ಸಮಾಜದ ವಿವಿಧ ಕ್ಷೇತ್ರಗಳಿಂದ ಬಂದ ಪ್ರತಿನಿಧಿಗಳು ಭಾಗವಹಿಸಿದ್ದರು.

ಸಭೆಯಲ್ಲಿ ರಾಜ್ಯ ಪ್ರಶಸ್ತಿ ವಿಜೇತ ಆನಂದ್ ಸಿ ತಿರುಮಲ ಮಾತನಾಡಿ ಇತ್ತೀಚಿನ ವರ್ಷಗಳಲ್ಲಿ ಪುರುಷರು ಎದುರಿಸುತ್ತಿರುವ ಸಾಮಾಜಿಕ, ಕಾನೂನು, ಮಾನಸಿಕ ಮತ್ತು ಆರ್ಥಿಕ ಸಮಸ್ಯೆಗಳು ಸಾರ್ವಜನಿಕ ಚರ್ಚೆಗೆ ಬರದೆ ಉಳಿದಿರು ವುದಾಗಿ ಅಭಿಪ್ರಾಯಪಟ್ಟರು. ಕುಟುಂಬ ನ್ಯಾಯಾಲಯದ ಪ್ರಕರಣಗಳು, ತಪ್ಪು ಪ್ರಕರಣಗಳಿಂದ ಉಂಟಾಗುವ ಮಾನಸಿಕ ಒತ್ತಡ, ಆತ್ಮಹತ್ಯೆಗಳ ಹೆಚ್ಚಳ, ಉದ್ಯೋಗ ಸ್ಥಳದ ಅಸಮಾನತೆ, ಹಾಗೂ ಸಾಮಾಜಿಕ ಅಪಹಾಸ್ಯ ಇವುಗಳ ಕುರಿತು ಗಂಭೀರವಾಗಿ ಚರ್ಚೆ ನಡೆ ಯಿತು.
ಪುರುಷರ ಸಮಸ್ಯೆಗಳನ್ನು ಮಹಿಳಾ ವಿರೋಧಿಯಾಗಿ ನೋಡುವ ಮನೋಭಾವ ತಪ್ಪು ಎಂದು ಸಭೆಯಲ್ಲಿ ಸ್ಪಷ್ಟಪಡಿಸಲಾಯಿತು. ಪುರುಷ ಆಯೋಗವು ಮಹಿಳಾ ಆಯೋಗದ ವಿರುದ್ಧವಲ್ಲ, ಬದಲಾಗಿ ಸಮಾಜದಲ್ಲಿ ಸಮತೋಲನ, ನ್ಯಾಯ ಮತ್ತು ಸಮಾನತೆ ಸಾಧಿಸುವ ಉದ್ದೇಶ ಹೊಂದಿದೆ ಎಂದು ತಿಳಿಸಲಾಯಿತು.

ರಾಷ್ಟ್ರ ಪ್ರಶಸ್ತಿ ವಿಜೇತರಾದ ಪ್ರಿಯಾಂಕಾ ದಿವಾಕರ್ ಮಾ ತನಾಡಿ ಸಭೆಯಲ್ಲಿ ಮುಂದಿನ ಹಂತವಾಗಿ ಸಾರ್ವಜನಿಕರಿಂದ ಅಭಿಪ್ರಾಯ ಸಂಗ್ರಹಿ ಸುವುದು ಕಾನೂನು ತಜ್ಞರೊಂದಿಗೆ ಚರ್ಚೆ ನಡೆಸು ವುದು ಸರ್ಕಾರಕ್ಕೆ ಅಧಿಕೃತ ಮನವಿ ಸಲ್ಲಿಸು ವುದು ರಾಜ್ಯ ಮಟ್ಟದ ಜಾಗೃತಿ ಕಾರ್ಯ ಕ್ರಮಗಳನ್ನು ಹಮ್ಮಿಕೊ ಳ್ಳುವುದು ಎಂಬ ತೀರ್ಮಾನಗಳನ್ನು ತೆಗೆದುಕೊಳ್ಳ ಲಾಯಿ ತು. ಈ ಪೂರ್ವಭಾವಿ ಸಭೆ ಮೂಲಕ ಪುರುಷ ಆಯೋಗ ಸ್ಥಾಪನೆಯ ಕುರಿತ ಚರ್ಚೆಗೆ ಅಧಿಕೃತ ಆರಂಭ ದೊರೆತಿದ್ದು, ಮುಂದಿನ ದಿನಗಳಲ್ಲಿ ಇದನ್ನು ಜನಾಂದೋಲನವಾಗಿ ರೂಪಿಸುವ ಸಂಕಲ್ಪವನ್ನು ಸಭೆ ವ್ಯಕ್ತಪಡಿಸಿತು. ಇನ್ನು ಸಭೆಯಲ್ಲಿ ಪ್ರಿಯಾಂಕಾ ದಿವಾಕರ್, ಎಂ. ಮುನಿಕುಮಾರ್, ಶ್ರೀಧರ್ ಎಲ್, ರುದ್ರೇಶ್, ರಂಗನಾಥ್ ಎಲ್ ಪಾತ್ರೋಟಿ, ನಾಗರಾಜ್ ಪಾಟೀಲ್ ಸೇರಿದರು.

## ಶಬರಿಮಲೆ ಚಿನ್ನ ಕೇಸ್ ಟ್ವಿಸ್ಟ್: ರೊದ್ದಂ ಜ್ಯುವೆಲ್ಸ್ ಮೇಲೆ ಎಸ್‌ಐಟಿ ದಾಳಿ




**ಬಳ್ಳಾರಿ**: ಕೇರಳದ ಶಬರಿಮಲೆ ಅಯ್ಯಪ್ಪ ಸ್ವಾಮಿ ದೇವಸ್ಥಾನದಲ್ಲಿ 4.5 ಕೆಜಿ ಚಿನ್ನ ಕಳವು ಪ್ರಕರಣಕ್ಕೆ ಸಂಬಂಧಿಸಿದಂತೆ ಕೇರಳದ ಎಸ್‌ಐಟಿ ಟೀಂ ಬಳ್ಳಾರಿಯ ರೊದ್ದಂ ಜ್ಯುವೆಲ್ಸ್ ಅಂಗಡಿಗೆ ದಾಳಿ ನಡೆಸಿ ಶೋಧ ನಡೆಸಿದೆ. ಈಗಾಗಲೇ ಚಿನ್ನ ಕಳ್ಳತನ ಪ್ರಕರಣದಲ್ಲಿ ರೊದ್ದಂ ಜ್ಯುವೆಲ್ಸ್ ಶಾಪ್ ಮಾಲೀಕ ಗೋವರ್ಧನ್ ಅವರನ್ನ ಬಂಧಿಸಲಾಗಿದೆ.
ಈ ಹಿಂದೆಯೂ ಅಕ್ಟೋಬರ್ 24ರಂದು ರೊದ್ದಂ ಜ್ಯುವೆಲ್ಸ್ ಶಾಪ್ ಮೇಲೆ ಕೇರಳ ಎಸ್‌ಐಟಿ ಟೀಂ ದಾಳಿ ಮಾಡಿತ್ತು. ಇದೀಗ ಮತ್ತೆ ದಾಳಿ ಮಾಡಿದ ಎಸ್‌ಐಟಿ ಅಧಿಕಾರಿಗಳು, ಜ್ಯುವೆಲ್ಲರಿ ಶಾಪ್ ಡೋರ್ ಕ್ಲೋಸ್ ಮಾಡಿಕೊಂಡು ತಪಾಸಣೆ ನಡೆಸಿದ್ದಾರೆ. ಛೆದ ಎರಡು ದಿನದ ಹಿಂದೆ ರೊದ್ದಂ ಜ್ಯುವೆಲ್ಸ್ ಮಾಲೀಕ ಗೋವರ್ಧನ್ ಅವರನ್ನು ಬಂಧಿಸಲಾಗಿದೆ. ಬಳಿಕ ವಿಚಾರಣೆ ವೇಳೆ ಗೋವರ್ಧನ್‌ರಿಂದ ಎಸ್‌ಐಟಿ ಅಧಿಕಾರಿಗಳು ಹಲವು ವಿಷಯ ಬಾಯಿಬಿಡಿಸಿದ್ದಾರೆ.

ಗೋವರ್ಧನ್ ನೀಡಿದ ಮಾಹಿತಿ ಆಧಾರದ ಮೇಲೆ ಮತ್ತೆ ಗೋವರ್ಧನ್ ಅವರ ಜ್ಯುವೆಲ್ಲರಿ ಶಾಪ್ ಮೇಲೆ ದಾಳಿ ಮಾಡಿ, ಮಾಹಿತಿ ಕಲೆ ಹಾಕಿದ್ದಾರೆ. ಜ್ಯುವೆಲ್ಲರಿ ಶಾಪ್‌ನಲ್ಲಿರುವ ಹತ್ತು ಸಿಬ್ಬಂದಿಗಳ ವಿಚಾರಣೆ ಮಾಡಿದ ಎಸ್‌ಐಟಿ ಅಧಿಕಾರಿಗಳು,

ಗೋವರ್ಧನ್ ಅವರ ಹೇಳಿಕೆ ಹಾಗೂ ಅವರ ಸಿಬ್ಬಂದಿ ಹೇಳಿಕೆ ತಾಳೆ ಹಾಕಿ, ಮಾಹಿತಿ ಸಂಗ್ರಹಿಸಿ ವಾಪಸ್ ತೆರಳಿದ್ದಾರೆ.

## ಸೋಶಿಯಲ್ ಮೀಡಿಯಾ ಪರಿಚಯದ ಬೆನ್ನಲ್ಲೇ ಯುವತಿಯ ಮೇಲೆ ಹಲ್ಲೆ

**ಬೆಂಗಳೂರು**:ಇನ್ಸ್ಟಾಗ್ರಾಮ್ ಸಿಕ್ಕ ಯುವಕನೊಬ್ಬ ಪ್ರೀತಿ ವಿಚಾರವಾಗಿ ನಡು ರಸ್ತೆಯಲ್ಲೇ ಯುವತಿಯ ಮೇಲೆ ಹಲ್ಲೆ ನಡೆಸಿರುವ ಘಟನೆ ಬೆಂಗಳೂರಿನ ಜ್ಞಾನಭಾರತಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ. ಪಿ.ಜಿ ಬಳಿ ಕಾರಿನಲ್ಲಿ ಬಂದ ಯುವಕ, ಯುವತಿಗೆ ಹಲವು ಬಾರಿ ಥಳಿಸಿದ್ದು, ದೃಶ್ಯ ಸಿಸಿ ಕ್ಯಾಮೆರಾದಲ್ಲಿ ಸೆರೆಯಾಗಿದೆ. ಮಾಹಿತಿ ಪಡೆದ ಪೊಲೀಸರು ಆರೋಪಿಯನ್ನು ಬಂಧಿಸಿ ದ್ದು, ವಿಚಾರಣೆಗೊಳಪಡಿಸಿದ್ದಾರೆ.



ಆರೋಪಿಯನ್ನು ನವೀನ್ ಕುಮಾರ್ ಎಂದು ಗುರುತಿಸಲಾಗಿದ್ದು, ಸಂತ್ರಸ್ತ ಯುವತಿಯೊಂದಿಗೆ 2024ರಲ್ಲಿ ಇನ್‌ಸ್ಟಾಗ್ರಾಂ ಮೂಲಕ ಪರಿಚಯವಾಗಿತ್ತು ಎನ್ನಲಾಗಿದೆ. ಪರಿಚಯದ ಬಳಿಕ ಇಬ್ಬರ ನಡುವೆ ಫೋನ್ ಕರೆ ಮತ್ತು ಮೆಸೇಜ್ ಮೂಲಕ ಸಂಪರ್ಕ ಮುಂದುವರಿದಿತ್ತು. ಆದರೆ ನವೀನ್ ಕುಮಾರ್ ಯುವತಿಯನ್ನು ಪ್ರೀತಿಸಬೇಕು ಎಂದು ಬಲವಂತ ಮಾಡುತ್ತಿದ್ದನೆಂಬ ಆರೋಪ ಕೇಳಿಬಂದಿದೆ. ಇದರಿಂದ ಇಬ್ಬರ ನಡುವೆ ಪ್ರೀತಿ ಹಾಗೂ ಹಣಕಾಸಿನ ವಿಚಾರವಾಗಿ ವೈಮನಸ್ಸು ಉಂಟಾಗಿತ್ತು ಎನ್ನಲಾಗಿದೆ. ಪರಾರಿಯಾಗಿದ್ದ ಆರೋಪಿಯ ಬಂಧನ ಜ್ಞಾನಭಾರತಿಯಲ್ಲಿರುವ ಯುವತಿಯ ಪಿ.ಜಿ ಬಳಿ ಕಾರಿನಲ್ಲಿ ಬಂದ ನವೀನ್, ಹಾರನ್ ಹೊಡೆದು ಯುವತಿಯನ್ನು ಕರೆಯಲು ಯತ್ನಿಸಿದ್ದಾನೆ. ಈ ವೇಳೆ ಯುವತಿಯ ಸ್ನೇಹಿತೆ ಪೊಲೀಸರಿಗೆ ಕರೆ ಮಾಡುವುದಾಗಿ ಹೇಳಿದ್ದು, ಯುವತಿ ಹಿಂದಕ್ಕೆ ಸರಿಯಲು ಯತ್ನಿಸಿದ್ದಾಳೆ. ಆದರೆ ನವೀನ್ ಆಕೆಯ ವ್ಯಾನಿಟಿ ಬ್ಯಾಗ್ ಕಸಿದು ಅದರೊಳಗೆ ಹುಡುಕಾಟ ನಡೆಸಿ, ಯುವತಿಯ ಹಿಂದೆ ಓಡಿ ಹಿಡಿದು ಎಳೆದಾಡಿ ಹಲ್ಲೆ ನಡೆಸಿದ್ದಾನೆ. ಎರಡು ಬಾರಿಗೂ ಹೆಚ್ಚು ಹಲ್ಲೆ ನಡೆಸಿರುವ ದೃಶ್ಯ ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿವೆ. ಘಟನೆಯ ನಂತರ ಆರೋಪಿಯು ಸ್ಥಳದಿಂದ ಪರಾರಿಯಾಗಿದ್ದರೂ, ಜ್ಞಾನಭಾರತಿ ಪೊಲೀಸರು ತ್ವರಿತ ಕಾರ್ಯಾಚರಣೆ ನಡೆಸಿ ನವೀನ್ ಕುಮಾರ್‌ನನ್ನು ವಶಕ್ಕೆ ಪಡೆದಿದ್ದಾರೆ.

ಈ ಸಂಬಂಧ ಪ್ರಕರಣ ದಾಖಲಿಸಿಕೊಂಡು ಹೆಚ್ಚಿನ ತನಿಖೆ ಮುಂದುವರಿಸಿದ್ದಾರೆ.

## ನಶೆಯಲ್ಲಿದ್ದವನ ಬರ್ಬರ ಕೊಲೆ; ದೇವಸ್ಥಾನದ ಎದುರೇ ಹರಿದ ನೆತ್ತರು

ಧಾರವಾಡ: ಬಸಪ್ಪನ ದೇವಸ್ಥಾನದ ಎದುರೇ ವ್ಯಕ್ತಿಯೋರ್ವರನ್ನು ಮಾರಕಾಸ್ತ್ರಗಳಿಂದ ಕೊಚ್ಚಿ ಬರ್ಬರವಾಗಿ ಕೊಲೆ ಮಾಡಿರುವ ಘಟನೆ ಧಾರವಾಡ ಜಿಲ್ಲೆಯ ಕಲಘಟಗಿ ತಾಲೂಕಿನ ಹುಣಸಿಕಟ್ಟಿ ಗ್ರಾಮದಲ್ಲಿ ನಡೆದಿದೆ. ಹುಬ್ಬಳ್ಳಿ ತಾಲೂಕಿನ ರಾಮನಕೊಪ್ಪ ಗ್ರಾಮ ನಿವಾಸಿ ವಿಟ್ಠಲ್ ಕೂರಾಡಿ ಮೃತ ದುರ್ದೈವಿಯಾಗಿದ್ದು, ಇವರ ಸಂಬಂಧಿಕರೇ ಆರೋಪಿಗಳು ಎಂಬುದು ಪೊಲೀಸರ ತನಿಖೆ ವೇಳೆ ಬಯಲಾಗಿದೆ.
ಕಲಘಟಗಿ ತಾಲೂಕಿನ ಹುಣಸಿಕಟ್ಟಿ ಗ್ರಾಮದ ಕಸ್ತೂರಿ ಜೊತೆ ವಿವಾಹವಾಗಿದ್ದ ವಿಟ್ಠಲ್, ಪೆಂಡಾಲ್ ಅಂಗಡಿಯೊಂದರಲ್ಲಿ ಕೆಲಸ ಮಾಡಿಕೊಂಡಿದ್ದರು. ನಿತ್ಯವೂ ಕುಡಿದು ಬಂದು ಈತ ಜಗಳ ಮಾಡುತ್ತಿದ್ದ ಹಿನ್ನೆಲೆ ಪತ್ನಿ ಕಸ್ತೂರಿ ತವರುಮನೆಗೆ ಬಂದು ಹೆತ್ತವರ ಜೊತೆ ವಾಸವಿದ್ದರು. ಕಸ್ತೂರಿ ಮತ್ತು ವಿಟ್ಠಲ್ ದಂಪತಿಗೆ ಮೂವರು ಮಕ್ಕಳೂ ಇದ್ದು, ಮಾವನ ಮನೆಗೆ ಆಗಾಗ ವಿಟ್ಠಲ್ ಬಂದು ಹೋಗುತ್ತಿದ್ದರು.

ಅದರಂತೆ ನಿನ್ನೆ ರಾತ್ರಿಯೂ ಮಾವನ ಮನೆಗೆ ಬಂದಿದ್ದರು. ಬಳಿಕ ದೇವಸ್ಥಾನದಲ್ಲಿ ಮಲಗಿದ್ದರು. ಆದರೆ ರಾತ್ರಿ ಬೆಳಗಾಗುವುದರ ಒಳಗೆ ವಿಟ್ಠಲ್ ಕೊಲೆಯಾಗಿದೆ. ಈ ಬಗ್ಗೆ ಮಾಹಿತಿ ಸಿಗುತ್ತಿದ್ದಂತೆ ಕಲಘಟಗಿ ಠಾಣೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸುವ ಜೊತೆಗೆ ಪ್ರಕರಣ ದಾಖಲಿಸಿಕೊಂಡಿದ್ದಾರೆ. ಆರೋಪಿಗಳ ಪತ್ತೆಗೆ ಖಾಕಿ ಮುಂದಾದಾಗ ಕೊಲೆಯಾದ ವಿಟ್ಠಲ್ ಸಹೋದರ ಅಣ್ಣಪ್ಪ ಮತ್ತು ಕಸ್ತೂರಿ ಅವರ ಸಹೋದರ ಪುಂಡಲೀಕ ಎಂಬುದು ಬಹಿರಂಗವಾಗಿದೆ.

ಕಳ್ಳತನವನ್ನೂ ವಿಟ್ಠಲ್ ಮಾಡುತ್ತಿದ್ದರು ಎನ್ನಲಾಗಿದ್ದು, ಸ್ವತಃ ಸಹೋದರನ ಬೈಕ್ ಕದ್ದು ತಂದು ಅದಕ್ಕೆ ಬೆಂಕಿ ಹಚ್ಚಿದ್ದರಂತೆ. ಹೀಗಾಗಿ ಅಣ್ಣಪ್ಪ, ವಿಟ್ಠಲ್ ಮೇಲೆ ಸಿಟ್ಟಾಗಿದ್ದ. ಇನ್ನೊಂದು ಕಡೆ ಕುಡಿದು ಬಂದು ತನ್ನ ಸಹೋದರಿಗೆ ಕಿರುಕುಳ ನೀಡುತ್ತಿದ್ದ ಕಾರಣ ಪುಂಡಲೀಕ ಕೂಡ ಮುನಿಸಿಕೊಂಡಿದ್ದ.

## ಪತ್ನಿ ಜೊತೆ ಜಗಳ; ಗನ್ ತೆಗೆದು ಶೂಟೌಟ್ ಮಾಡಿದ ಪತಿ ಮಹಿಳೆ ಸಾವು

**ಬೆಂಗಳೂರು**: ಹೆಂಡತಿ ಜೊತೆ ಜಗಳ ತೆಗೆದ ವ್ಯಕ್ತಿ ಗನ್‌ನಿಂದ ಗುಂಡಿನ ದಾಳಿ ನಡೆಸಿರುವ ಘಟನೆ ಬೆಂಗಳೂರಿನ ಬಸವೇಶ್ವರ ನಗರದ ಹೋಟೆಲ್ ಬಳಿ ನಡೆದಿದೆ.

ಗಂಭೀರ ಗಾಯಗೊಂಡು ಆಸ್ಪತ್ರೆಗೆ ದಾಖಲಾಗಿದ್ದ ಮಹಿಳೆ ಸಾವನ್ನಪ್ಪಿದ್ದಾರೆ. ಬಾಲಮುರುಗನ್ ತನ್ನ ಪತ್ನಿ ಮೇಲೆ ಗುಂಡು ಹಾರಿಸಿದ ವ್ಯಕ್ತಿ. ಭುವನೇಶ್ವರಿ ಗುಂಡೇಟಿಗೆ ಗಂಭೀರ ಗಾಯಗೊಂಡು ಮೃತಪಟ್ಟ ಮಹಿಳೆ. ವಿಚಾರ ತಿಳಿದ ತಕ್ಷಣ ಮಾಗಡಿ ರೋಡ್ ಪೊಲೀಸರು ಸ್ಥಳಕ್ಕೆ ಧಾವಿಸಿ ಪರಿಶೀಲನೆ ನಡೆಸಿದ್ದಾರೆ. ತಮಿಳುನಾಡಿನ ಸೇಲಂ ಮೂಲದ ದಂಪತಿ ಇವರು.

ಬಾಲಮುರುಗನ್ ಸಾಫ್ಟ್‌ವೇರ್ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದ. ಈಗ ರಿಸೈನ್ ಮಾಡಿದ್ದಾನೆ. ಪತ್ನಿ ಭುವನೇಶ್ವರಿ ಬ್ಯಾಂಕ್ ಉದ್ಯೋಗಿ ಆಗಿದ್ದರು. ಪತ್ನಿ ಮೇಲೆ ಅನುಮಾನ ವ್ಯಕ್ತಪಡಿಸಿ ಕೊಲೆ ಮಾಡಿದ್ದಾನೆ ಎನ್ನಲಾಗಿದೆ.ಪತಿ-ಪತ್ನಿ ನಡುವೆ ಕೋರ್ಟ್‌ನಲ್ಲಿ ಡಿವೋರ್ಸ್ ಕೇಸ್ ನಡೆಯುತ್ತಿತ್ತು.

ಇಬ್ಬರೂ ಕೋರ್ಟ್‌ಗೆ ಹಾಜರಾಗಿದ್ದರು. ಕೋರ್ಟ್ ಕೇಸ್ ಮುಗಿಸಿ ಹೊರಬಂದಿದ್ದರು.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203,
Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

# ಬಿಜೆಪಿ ಶಾಸಕ ಬೈರತಿ ಬಸವರಾಜ್‌ಗೆ ಬಿಗ್ ಶಾಕ್: ನಿರೀಕ್ಷಣಾ ಜಾಮೀನು ಅರ್ಜಿ ವಜಾ





ಬಿಜೆಪಿ ಶಾಸಕ ಹಾಗೂ ಮಾಜಿ ಸಚಿವ ಬೈರತಿ ಬಸವರಾಜ್ ಅವರಿಗೆ ಕರ್ನಾಟಕ ಹೈಕೋರ್ಟ್‌ನಿಂದ ಭಾರಿ ಆಘಾತ ಎದುರಾಗಿದೆ. ರೌಡಿ ಶೀಟರ್ ಶಿವಪ್ರಕಾಶ್ ಅಲಿಯಾಸ್ ಬಿಕ್ಲು ಶಿವ ಕೊಲೆ ಪ್ರಕರಣದಲ್ಲಿ 5ನೇ ಆರೋಪಿಯಾಗಿರುವ ಅವರ ನಿರೀಕ್ಷಣಾ ಜಾಮೀನು ಅರ್ಜಿಯನ್ನು ಹೈಕೋರ್ಟ್ ವಜಾಗೊಳಿಸಿದೆ. ನ್ಯಾಯಮೂರ್ತಿ ಸುನಿಲ್ ದತ್ ಯಾದವ್ ಅವರ ಏಕಸದಸ್ಯ ಪೀಠ ಈ ಆದೇಶ ಹೊರಡಿಸಿದ್ದು, ತನಿಖೆಯಲ್ಲಿ ಕಸ್ಟಡಿಯಲ್ ವಿಚಾರಣೆ ಅಗತ್ಯ ಎಂದು ಆದೇಶದಲ್ಲಿ ಉಲ್ಲೇಖಿಸಿದೆ.

ಇದರಿಂದ ಯಾವುದೇ ಕ್ಷಣದಲ್ಲೂ ಬೈರತಿ ಬಸವರಾಜ್ ಬಂಧನಕ್ಕೊಳಗಾಗುವ ಎಂಬ ಭೀತಿ ಎದುರಾಗಿದೆ. ಪ್ರಕರಣದ ಹಿನ್ನೆಲೆ: ಜುಲೈ 15ರಂದು ಬೆಂಗಳೂರಿನ ಭಾರತಿನಗರದಲ್ಲಿ ಬಿಕ್ಲು ಶಿವನನ್ನು ಗ್ಯಾಂಗ್ ದಾಳಿ ನಡೆಸಿ ಕೊಲೆ ಮಾಡಲಾಗಿತ್ತು. ಆಸ್ತಿ ವಿವಾದಕ್ಕೆ ಸಂಬಂಧಿಸಿದ ಈ ಕೊಲೆ ಪ್ರಕರಣದಲ್ಲಿ ಬೈರತಿ ಬಸವರಾಜ್ ಅವರ ಹೆಸರು ಎಫ್‌ಐಆರ್‌ನಲ್ಲಿ 5ನೇ ಆರೋಪಿಯಾಗಿ ಬಂದಿತ್ತು. ಪ್ರಮುಖ ಆರೋಪಿ ಜಗದೀಶ್ ಅಲಿಯಾಸ್ ಜಗ್ಗು ಜೊತೆ ಅವರ ನಿಕಟ ಸಂಪರ್ಕವಿದ್ದು, ಕೊಲೆಗೆ ಪ್ರೇರಣೆ ನೀಡಿದ ಆರೋಪವಿದೆ. ಸಿಐಡಿ ತನಿಖೆಯಲ್ಲಿ ಇದಕ್ಕೆ ಸಂಬಂಧಿಸಿದ ಸಾಕ್ಷ್ಯಗಳು ದೊರೆತಿವೆ ಎಂದು ತಿಳಿದುಬಂದಿದೆ. ಬೈರತಿ ಬಸವರಾಜ್ ಸಲ್ಲಿಸಿದ್ದ ಅರ್ಜಿಯಲ್ಲಿ ಕೆಸಿಒಸಿಎ (ಕರ್ನಾಟಕ ಸಂಘಟಿತ ಅಪರಾಧ ನಿಯಂತ್ರಣ ಕಾಯ್ದೆ) ಅನ್ವಯವನ್ನು ರದ್ದುಗೊಳಿಸುವಂತೆ ಕೋರಿದ್ದರು. ಹೈಕೋರ್ಟ್ ಇದನ್ನು ಒಪ್ಪಿ ಕೆಸಿಒಸಿಎ ರದ್ದುಗೊಳಿಸಿದೆ. ಆದರೆ, ನಿರೀಕ್ಷಣಾ ಜಾಮೀನು ನೀಡಲು ನಿರಾಕರಿಸಿ, ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸುವಂತೆ ಸೂಚಿಸಿದೆ.

ತನಿಖೆ ಇನ್ನೂ ಪೂರ್ಣಗೊಂಡಿಲ್ಲ. ಆದೇಶ ಬಂದ ಬಳಿಕ ಬೈರತಿ ಬಸವರಾಜ್ ಅಜ್ಞಾತ ಸ್ಥಳಕ್ಕೆ ತಲೆಮರೆಸಿಕೊಂಡಿದ್ದಾರೆ. ಅವರ ಮೊಬೈಲ್ ಸ್ವಿಚ್ ಆಫ್ ಆಗಿದ್ದು, ಬೆಳಗಾವಿ ಅಧಿವೇಶನದ ನಂತರ ನಾಪತ್ತೆಯಾಗಿದ್ದಾರೆ ಎಂದು ಮೂಲಗಳು ತಿಳಿಸಿವೆ. ಸಿಐಡಿ ಮೂರು ವಿಶೇಷ ತಂಡಗಳನ್ನು ರಚಿಸಿ ತೀವ್ರ ಹುಡುಕಾಟ ನಡೆಸುತ್ತಿದೆ. ಪುಣೆಯಲ್ಲಿ ತಲೆಮರೆಸಿಕೊಂಡಿರಬಹುದು ಎಂಬ ಅನುಮಾನದಲ್ಲೂ ಪರಿಶೀಲನೆ ನಡೆಯುತ್ತಿದೆ.

ಸಿಐಡಿ 18 ಜನರ ವಿರುದ್ಧ ಚಾರ್ಜ್‌ಶೀಟ್ ಸಲ್ಲಿಸಿದ್ದು, ಬೈರತಿ ಬಸವರಾಜ್ ಅವರ ಹೆಸರು ಇದರಲ್ಲಿ ಸೇರಿಲ್ಲ ಏಕೆಂದರೆ ಅವರು ಇನ್ನೂ ಬಂಧನಕ್ಕೊಳಗಾಗಿಲ್ಲ. ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದಲ್ಲಿ ಬೈರತಿ ಬಸವರಾಜ್ ನಿರೀಕ್ಷಣಾ ಜಾಮೀನು ಅರ್ಜಿ ಸಲ್ಲಿಸಿದ್ದು, ವಾದ-ಪ್ರತಿವಾದ ನಡೆದಿದೆ. ಡಿಸೆಂಬರ್ 23ರಂದು ಆದೇಶ ಕಾಯ್ದಿರಿಸಲಾಗಿದೆ ಎಂದು ತಿಳಿದುಬಂದಿದೆ. ಈ ಪ್ರಕರಣ ರಾಜ್ಯ ರಾಜಕಾರಣದಲ್ಲಿ ಭಾರಿ ಚರ್ಚೆಗೆ ಕಾರಣವಾಗಿದೆ.

# ESIC ಆಸ್ಪತ್ರೆಗಳಲ್ಲಿ ಅಸಂಘಟಿತ ಕಾರ್ಮಿಕರಿಗೂ ಉಚಿತ ಚಿಕಿತ್ಸೆ



**ಕಲಬುರಗಿ**: ಇದುವರೆಗೆ ಕೇವಲ ಸಂಘಟಿತ ವಲಯದ ಕಾರ್ಮಿಕರಿಗೆ ಸೀಮಿತವಾಗಿದ್ದ ಇಎಸ್‌ಐಸಿ (ESIC) ಆಸ್ಪತ್ರೆಗಳ ಉಚಿತ ವೈದ್ಯಕೀಯ ಸೇವೆಯು, ಇನ್ಮುಂದೆ ಅಸಂಘಟಿತ ವಲಯದ ಕಾರ್ಮಿಕರಿಗೂ ಲಭ್ಯವಾಗಲಿದೆ ಎಂದು ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಖಾತೆ ಸಹಾಯಕ ಸಚಿವರಾದ ಶೋಭಾ ಕರಂದ್ಲಾಜೆ ಘೋಷಿಸಿದ್ದಾರೆ.

ಕಲಬುರಗಿಯಲ್ಲಿ ನಡೆದ ವಿವಿಧ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನಾ ಸಮಾರಂಭದಲ್ಲಿ ಪಾಲ್ಗೊಂಡು ಈ ಬಗ್ಗೆ ಮಾಹಿತಿ ನೀಡಿದ್ದಾರೆ. ಕೇಂದ್ರ ಸರ್ಕಾರದ ಈ ಮಹತ್ವದ ನಿರ್ಧಾರದಿಂದಾಗಿ ಕೃಷಿ ಕಾರ್ಮಿಕರು, ಗಾರ್ಮೆಂಟ್ಸ್ ನೌಕರರು, ಗಿಗ್ ವರ್ಕರ್ಸ್ (ಡೆಲಿವರಿ ಬಾಯ್ಸ್, ಆ್ಯಪ್ ಆಧಾರಿತ ಕೆಲಸಗಾರರು) ಸೇರಿದಂತೆ ಅಸಂಘಟಿತ ವಲಯ ದಲ್ಲಿ ಗುರುತಿಸಿಕೊಂಡಿರುವ ಲಕ್ಷಾಂತರ ಶ್ರಮಿಕರಿಗೆ ಮತ್ತು ಅವರ ಅವಲಂಬಿತರಿಗೆ ಗುಣಮಟ್ಟದ ಚಿಕಿತ್ಸೆ ಇನ್ಮುಂದೆ ಉಚಿತವಾಗಿ ದೊರೆಯಲಿದೆ.

ಪ್ರಧಾನಿ ನರೇಂದ್ರ ಮೋದಿ ಅವರ ಆಶಯದಂತೆ ಪ್ರತಿಯೊಬ್ಬ ಶ್ರಮಿಕನಿಗೂ ಆರೋಗ್ಯ ಭದ್ರತೆ ಒದಗಿಸುವುದು ನಮ್ಮ ಗುರಿ ಎಂದು ಸಚಿವೆ ಶೋಬಾ ಶೋಭಾ ಕರಂದ್ಲಾಜೆ ತಿಳಿಸಿದರು. ಕಾರ್ಮಿಕರ ಮಕ್ಕಳಿಗಾಗಿ 10 ಹೊಸ ಮೆಡಿಕಲ್ ಕಾಲೇಜು: ಕಾರ್ಮಿಕರ ಕುಟುಂಬದ ಶೈಕ್ಷಣಿಕ ಅಭಿವೃದ್ಧಿಗೂ ಸರ್ಕಾರ ಒತ್ತು ನೀಡುತ್ತಿದ್ದು, ದೇಶಾದ್ಯಂತ ಹೊಸದಾಗಿ 10 ಇಎಸ್‌ಐಸಿ ಮೆಡಿಕಲ್ ಕಾಲೇಜುಗಳನ್ನು ಸ್ಥಾಪಿಸಲಾಗುತ್ತಿದೆ. ಪ್ರಸ್ತುತ ಕರ್ನಾಟಕದಲ್ಲಿ ಈಗಾಗಲೇ ಎರಡು ಇಎಸ್‌ಐಸಿ ಮೆಡಿಕಲ್ ಕಾಲೇಜು ಗಳು ಕಾರ್ಯ ನಿರ್ವಹಿಸುತ್ತಿವೆ. ಇದರೊಂದಿಗೆ ಹೆಚ್ಚಿನ ಸಂಖ್ಯೆಯ ಮೆಡಿಕಲ್ ಸೀಟುಗಳು ಕಾರ್ಮಿಕರ ಮಕ್ಕಳಿಗೆ ಲಭ್ಯವಾಗಲಿವೆ.

ವೈದ್ಯರ ನೇಮಕಾತಿಗೆ ಕ್ರಮ: ಇಎಸ್‌ಐಸಿ ಆಸ್ಪತ್ರೆಗಳಲ್ಲಿ ಕಂಡುಬರುತ್ತಿರುವ ವೈದ್ಯರ ಕೊರತೆಯನ್ನು ನೀಗಿಸಲು ಕೇಂದ್ರ ಸರ್ಕಾರವು ನೇಮಕಾತಿ ನಿಯಮಗಳಲ್ಲಿ ಮಹತ್ವದ ಸರಳೀಕರಣ ಮಾಡಿದೆ. ಅಗತ್ಯವಿರುವ ತಜ್ಞ ವೈದ್ಯರು ಮತ್ತು ಸಿಬ್ಬಂದಿಯನ್ನು ಶೀಘ್ರವೇ ನೇಮಕ ಮಾಡಿಕೊಳ್ಳುವ ಮೂಲಕ ಆಸ್ಪತ್ರೆಗಳ ಸೇವೆಯನ್ನು ಮೇಲ್ದರ್ಜೆಗೇರಿಸಲಾಗುವುದು ಎಂದು ಶೋಭಾ ಕರಂದ್ಲಾಜೆ ಭರವಸೆ ನೀಡಿದ್ದಾರೆ. ಕಲಬುರಗಿಯಲ್ಲಿ ಕ್ರೀಡಾ ಸಂಕೀರ್ಣ, ಛಾವಣಿಯ ಸೌರ ವಿದ್ಯುತ್ ವ್ಯವಸ್ಥೆ ಮತ್ತು ಅಂತರ್ಜಲ ಮರುಪೂರಣ ಸೌಲಭ್ಯಗಳನ್ನು ಉದ್ಘಾಟಿಸಿದ ಸಚಿವರು, ಜಿಲ್ಲೆಯ ಬಾಹ್ಯಾಕಾಶ ಮತ್ತು ಮೂಲಸೌಕರ್ಯ ಅಭಿವೃದ್ಧಿಯ ಬಗ್ಗೆಯೂ ಮೆಚ್ಚುಗೆ ವ್ಯಕ್ತಪಡಿಸಿದರು.

# ಜಮೀರ್ ಅಹ್ಮದ್ ಆಪ್ತ ಕಾರ್ಯದರ್ಶಿ ಸರ್ಫರಾಜ್ ಖಾನ್ ನಿವಾಸದ ಮೇಲೆ ಲೋಕಾಯುಕ್ತ ದಾಳಿ





**ಬೆಂಗಳೂರು:** ರಾಜ್ಯದಲ್ಲಿ ಭ್ರಷ್ಟಾಚಾರದ ವಿರುದ್ಧ ಸಮರ ಸಾರಿರುವ ಲೋಕಾಯುಕ್ತ ಅಧಿಕಾರಿಗಳು ಬುಧವಾರ ಮತ್ತೊಂದು ಬೃಹತ್ ಕಾರ್ಯಾಚರಣೆ ನಡೆಸಿದ್ದಾರೆ. ವಸತಿ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವ ಜಮೀರ್ ಅಹ್ಮದ್ ಖಾನ್ ಅವರ ಆಪ್ತ ಕಾರ್ಯದರ್ಶಿ (PS) ಸರ್ದಾರ್ ಸರ್ಫರಾಜ್ ಖಾನ್ ಅವರ ನಿವಾಸ ಸೇರಿದಂತೆ ರಾಜ್ಯದ ಒಟ್ಟು 10 ಕಡೆಗಳಲ್ಲಿ ಏಕಕಾಲಕ್ಕೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆದಿದ.

ಹಲಸೂರಿನಲ್ಲಿರುವ ಸರ್ಫರಾಜ್ ಖಾನ್ ಅವರ ಮುಖ್ಯ ನಿವಾಸ ಸೇರಿದಂತೆ ನಗರದ ವಿವಿಧೆಡೆ ಇರುವ 7 ಮನೆಗಳ ಮೇಲೆ ದಾಳಿ ಮಾಡಲಾಗಿದೆ. ಜೊತೆಗೆ ಕೊಡಗಿನ ಸುಂದರ ಪರಿಸರದಲ್ಲಿರುವ ಎರಡು ಬೃಹತ್ ಕಾಫಿ ಎಸ್ಟೇಟ್‌ಗಳ ಮೇಲೆ ಅಧಿಕಾರಿಗಳು ದಾಳಿ ನಡೆಸಿ ದಾಖಲೆಗಳ ಪರಿಶೀ ಲನೆ ನಡೆಸು ತ್ತಿದ್ದಾರೆ. ಇದರೊಟ್ಟಿಗೆ ಮೈಸೂರು ಜಿಲ್ಲೆಯ ಹೆ ಚ್ . ಡಿ . ಕೋಟೆಯಲ್ಲಿರುವ ಐಷಾರಾಮಿ ರೆಸಾರ್ಟ್ ಮೇಲೆಯೂ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿವೆ. ಕೆಎಎಸ್ ಅಧಿಕಾರಿಯಾಗಿರುವ ಸರ್ದಾರ್ ಸರ್ಫರಾಜ್ ಖಾನ್ ಅವರು ಸದ್ಯ ವಸತಿ ಇಲಾಖೆಗೆ ನಿಯೋಜನೆಗೊಂಡಿದ್ದಾರೆ.

ಸಚಿವ ಜಮೀರ್ ಅಹ್ಮದ್ ಖಾನ್ ಅವರಿಗೆ ಆಪ್ತ ಕಾರ್ಯದರ್ಶಿಯಾಗಿ ದೀರ್ಘಕಾಲದಿಂದ ಕಾರ್ಯನಿರ್ವಹಿಸುತ್ತಿದ್ದಾರೆ. ಆದಾಯಕ್ಕಿಂತ ಹೆಚ್ಚಿನ ಆಸ್ತಿ ಗಳಿಸಿರುವ ಬಗ್ಗೆ ಕೇಳಿಬಂದ ಖಚಿತ ದೂರಿನ ಮೇರೆಗೆ ಲೋಕಾಯುಕ್ತ ಪೊಲೀಸರು ಎಫ್‌ಐಆರ್ ದಾಖಲಿಸಿಕೊಂಡು ಈ ಕಾರ್ಯಾಚರಣೆ ನಡೆಸಿದ್ದಾರೆ. ಬುಧವಾರ ಬೆಳ್ಳಂಬೆಳಿಗ್ಗೆ 5:30ರಿಂದಲೇ ಅಧಿಕಾರಿಗಳ ತಂಡ ಕಾರ್ಯಪ್ರವೃತ್ತವಾಗಿದೆ.

ಒಟ್ಟು 50ಕ್ಕೂ ಹೆಚ್ಚು ಲೋಕಾಯುಕ್ತ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಈ ಕಾರ್ಯಾ ಚರಣೆಯಲ್ಲಿ ಭಾಗಿಯಾಗಿದ್ದಾರೆ. ದಾಳಿಯ ವೇಳೆ ಅಪಾರ ಪ್ರಮಾಣದ ಚಿನ್ನಾಭರಣ, ನಗದು ಮತ್ತು ಆಸ್ತಿಗೆ ಸಂಬಂಧಿಸಿದ ಪ್ರಮುಖ ದಾಖಲೆಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಮೂಲಗಳು ತಿಳಿಸಿವೆ. ಸದ್ಯ ಎಲ್ಲಾ 10 ಸ್ಥಳಗಳಲ್ಲಿಯೂ ಅಧಿಕಾರಿಗಳು ಮೊಕ್ಕಾಂ ಹೂಡಿದ್ದು, ಲಾಕರ್‌ಗಳು ಮತ್ತು ಬ್ಯಾಂಕ್ ಖಾತೆಗಳ ವಿವರಗಳನ್ನು ಕಲೆಹಾಕುತ್ತಿದ್ದಾರೆ. ವಶಪಡಿಸಿಕೊಂಡ ದಾಖಲೆಗಳಿಗೂ ಮತ್ತು ಅವರ ಅಧಿಕೃತ ಆದಾಯಕ್ಕೂ ಇರುವ ವ್ಯತ್ಯಾಸದ ಬಗ್ಗೆ ತನಿಖೆ ನಡೆಸಲಾಗುತ್ತಿದೆ. ಸಚಿವರ ಆಪ್ತ ವಲಯದ ಅಧಿಕಾರಿಯ ಮೇಲೆಯೇ ದಾಳಿ ನಡೆದಿರುವುದು ರಾಜಕೀಯ ವಲಯದಲ್ಲೂ ಭಾರೀ ಸಂಚಲನ ಮೂಡಿಸಿದೆ. ದಾಳಿಯಲ್ಲಿ ಸಿಕ್ಕರುವ ನಗದು ಮತ್ತು ಒಟ್ಟು ಅಕ್ರಮ ಆಸ್ತಿಯ ಮೊತ್ತದ ಬಗ್ಗೆ ಲೋಕಾಯುಕ್ತ ಇಲಾಖೆಯು ಇನ್ನೂ ಅಧಿಕೃತ ಮಾಹಿತಿ ತಿಳಿಸಿಲ್ಲ. ಅಧಿಕಾರಿಗಳ ಮುಂದಿನ ಕ್ರಮ ಏನು ಎಂಬುದನ್ನ ಕಾದುನೋಡಬೇಕಿದೆ.

# LVM3 ಮೂಲಕ ಅಮೆರಿಕದ ಬೃಹತ್ 'ಬ್ಲೂಬರ್ಡ್' ಉಪಗ್ರಹ ಉಡಾವಣೆ



**ಶ್ರೀಹರಿಕೋಟಾ**: ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ (ISRO) ಬುಧವಾರ ಮುಂಜಾನೆ ಮತ್ತೊಂದು ಐತಿಹಾಸಿಕ ಸಾಧನೆ ಮಾಡಿದೆ. ಇಸ್ರೋದ ಅತ್ಯಂತ ಭಾರವಾದ ಮತ್ತು ಶಕ್ತಿಶಾಲಿ ಉಡಾವಣಾ ವಾಹಕವಾದ ಎಲ್‌ವಿಎಂ3-ಎಂ6 ರಾಕೆಟ್, ಅಮೆರಿಕದ ಹೊಸ ತಲೆಮಾರಿನ ಸಂವಹನ ಉಪಗ್ರಹ 'ಬ್ಲೂಬರ್ಡ್ ಬ್ಲಾಕ್-2 ಅನ್ನು ಹೊತ್ತು ಯಶಸ್ವಿಯಾಗಿ ನಭಕ್ಕೆ ಚಿಮ್ಮಿದೆ.

ಆಂಧ್ರ ಪ್ರದೇಶದ ಶ್ರೀಹರಿಕೋಟಾದಲ್ಲಿರುವ ಸತೀಶ್ ಧವನ್ ಬಾಹ್ಯಾಕಾಶ ಕೇಂದ್ರದ ಎರಡನೇ ಲಾಂಚ್ ಪ್ಯಾಡ್‌ನಿಂದ ಬೆಳಿಗ್ಗೆ ಸರಿಯಾಗಿ 8.54ಕ್ಕೆ ಈ ಉಡಾವಣೆ ನಡೆಯಿತು. 43.5 ಮೀಟರ್ ಎತ್ತರದ ಎಲ್‌ವಿಎಂ3 ರಾಕೆಟ್, ಇದೇ ಮೊದಲ ಬಾರಿಗೆ 6,100 ಕೆಜಿ ತೂಕದ ಬೃಹತ್ ಪೇಲೋಡ್ ಅನ್ನು ಹೊತ್ತು ಸಾಗುವ ಮೂಲಕ ತನ್ನ ಸಾಮರ್ಥ್ಯವನ್ನು ಜಗತ್ತಿಗೆ ಸಾಬೀತುಪಡಿಸಿದೆ. ಈ ಹಿಂದೆ ನವೆಂಬರ್ 2ರಂದು ನಡೆದ ಉಡಾವಣೆಯಲ್ಲಿ ಎಲ್‌ವಿಎಂ3-ಎಂ5 ರಾಕೆಟ್ 4,400 ಕೆಜಿ ತೂಕವನ್ನು ಹೊತ್ತೊಯ್ದಿತ್ತು.

ಈ ಬಾರಿ ಆ ಮಿತಿಯನ್ನು ಮೀರಿ ಹೊಸ ದಾಖಲೆ ಬರೆಯಲಾಗಿದೆ. ನೇರ ಸೆಲ್ಯುಲಾರ್ ಬ್ರಾಡ್‌ಬ್ಯಾಂಡ್: ಜಗತ್ತಿನಾದ್ಯಂತ ಇರುವ ಸ್ಮಾರ್ಟ್‌ಫೋನ್‌ಗಳಿಗೆ ಯಾವುದೇ ಭೂ-ಆಧಾರಿತ ಟವರ್‌ಗಳ ಅಗತ್ಯವಿಲ್ಲದೆ ನೇರವಾಗಿ ಹೈ-ಸ್ಪೀಡ್ ಸೆಲ್ಯುಲಾರ್ ಬ್ರಾಡ್‌ಬ್ಯಾಂಡ್ ಪೂರೈಸುವಂತೆ ಇದನ್ನು ವಿನ್ಯಾಸಗೊಳಿಸಲಾಗಿದೆ.

4G ಮತ್ತು 5G ಸೇವೆ: ಈ ಉಪಗ್ರಹದ ಮೂಲಕ ಪ್ರತಿಯೊಬ್ಬರಿಗೂ ಎಲ್ಲಾ ಸಮಯದಲ್ಲೂ 4G, 5G ಧ್ವನಿ ಕರೆ, ವಿಡಿಯೊ ಕಾಲ್, ಟೆಕ್ಸ್ಟ್ ಮೆಸೇಜ್ ಮತ್ತು ಡೇಟಾ ಸ್ಟ್ರೀಮಿಂಗ್ ಸೇವೆ ಲಭ್ಯವಾಗಲಿದೆ. ವಾಣಿಜ್ಯ ಉದ್ದೇಶ: ಇದನ್ನು ಸರ್ಕಾರಿ ಮತ್ತು ವಾಣಿಜ್ಯ ಸೇವೆಗಳ ಅಪ್ಲಿಕೇಷನ್‌ಗಳಿಗಾಗಿ ವಿಶೇಷವಾಗಿ ಅಭಿವೃದ್ಧಿಪಡಿಸಲಾಗಿದೆ. ಭೂ ಮೇಲ್ಮೈನಿಂದ 600 ಕಿ.ಮೀ. ಎತ್ತರದಲ್ಲಿ ಈ ಉಪಗ್ರಹವು ಕಾರ್ಯನಿರ್ವಹಿಸಲಿದೆ.

ಅಂತರರಾಷ್ಟ್ರೀಯ ಸಹಭಾಗಿತ್ವ ಈ ಯೋಜನೆಯು ಇಸ್ರೋದ ವಾಣಿಜ್ಯ ಅಂಗವಾದ 'ನ್ಯೂಸ್ಪೇಸ್ ಇಂಡಿಯಾ ಲಿಮಿಟೆಡ್' (NSIL) ಮತ್ತು ಅಮೆರಿಕ ಮೂಲದ 'ಎಎಸ್‌ಟಿ ಸ್ಪೇಸ್‌ಮೊಬೈಲ್' (AST SpaceMobile) ನಡುವೆ ನಡೆದ ಖಾಸಗಿ ಒಪ್ಪಂದದ ಫಲವಾಗಿದೆ.

ಅಮೆರಿಕದ ಕಂಪನಿಯು ಬಾಹ್ಯಾಕಾಶ ಆಧಾರಿತ ಸೆಲ್ಯುಲಾರ್ ನೆಟ್‌ವರ್ಕ್ ನಿರ್ಮಿಸಲು ಇಸ್ರೋದ ವಿಶ್ವಾಸಾರ್ಹತೆಯನ್ನು ಆಯ್ದುಕೊಂಡಿರುವುದು ಭಾರತಕ್ಕೆ ಹೆಮ್ಮೆಯ ವಿಷಯವಾಗಿದೆ. ಉಡಾವಣೆಯ ಪ್ರಕ್ರಿಯೆ ಲಿಕ್ವಿಡ್ ಪ್ರೊಪಲ್ಷನ್ ಸಿಸ್ಟಮ್ ಸೆಂಟರ್ (LPSC) ಅಭಿವೃದ್ಧಿಪಡಿಸಿದ ಈ ರಾಕೆಟ್ ಉಡಾವಣೆಯಾದ 15 ನಿಮಿಷಗಳಲ್ಲೇ ಉಪಗ್ರಹವನ್ನು ಯಶಸ್ವಿಯಾಗಿ ಬೇರ್ಪಡಿಸಿ ನಿಗದಿತ ಕಕ್ಷೆಗೆ ಸೇರಿಸಿದೆ. ಉಡಾವಣೆಯ ಪ್ರತಿ ಹಂತವೂ ಇಸ್ರೋ ವಿಜ್ಞಾನಿಗಳು ನಿರೀಕ್ಷಿಸಿದಂತೆಯೇ ನಡೆದಿದೆ ಎಂದು ಇಸ್ರೋ ತಿಳಿಸಿದೆ.

ಇಸ್ರೋದ ಈ ಯಶಸ್ಸು ಜಾಗತಿಕ ವಾಣಿಜ್ಯ ಉಡಾವಣಾ ಮಾರುಕಟ್ಟೆಯಲ್ಲಿ ಭಾರತದ ಸ್ಥಾನವನ್ನು ಮತ್ತಷ್ಟು ಗಟ್ಟಿಗೊಳಿಸಿದೆ. ಅತೀ ಕಡಿಮೆ ವೆಚ್ಚದಲ್ಲಿ ಮತ್ತು ಹೆಚ್ಚಿನ ನಿಖರತೆಯೊಂದಿಗೆ ಭಾರೀ ತೂಕದ ಉಪಗ್ರಹಗಳನ್ನು ಉಡಾವಣೆ ಮಾಡುವ ಸಾಮರ್ಥ್ಯ ಭಾರತಕ್ಕಿದೆ ಎಂದು ಈ ಯೋಜನೆ ಮತ್ತೊಮ್ಮೆ ತೋರಿಸಿಕೊಟ್ಟಿದೆ

# 50,000 ರೂ.ಗೆ ಹೆತ್ತ ಮಗುವನ್ನೇ ಮಾರಿದ ಪಾಪಿ ತಾಯಿ

**ಚಿತ್ರದುರ್ಗ**: ಹೆತ್ತವರಿಗೆ ಹೆಗ್ಗಣ ಮುದ್ದು ಅಂತಾರೆ. ಆದರೆ ಇಲ್ಲೊಂದು ಪಾಪಿ ತಾಯಿ ಅಕ್ರಮ ಸಂಬಂಧಕ್ಕೆ ಅಡ್ಡಿಯಾಯಿತೆಂದು ತನ್ನ ಎರಡು ವರ್ಷದ ಮಗುವನ್ನೇ ಮಾರಾಟ ಮಾಡಿರುವ ಘಟನೆ ಚಿತ್ರದುರ್ಗ ಜಿಲ್ಲೆ ಹಿರಿಯೂರು ನಗರದಲ್ಲಿ ಬೆಳಕಿಗೆ ಬಂದಿದೆ. ಕೆಲದಿನಗಳಿಂದ ಈ ಮಗು ಕಾಣದ ಹಿನ್ನೆಲೆಯಲ್ಲಿ ಅಲರ್ಟ್ ಆದ ಸ್ಥಳೀಯರು ಮಕ್ಕಳ ರಕ್ಷಣಾ ಘಟಕಕ್ಕೆ ಮಾಹಿತಿ ನೀಡಿದ್ದರು. ಹೀಗಾಗಿ ಚಿತ್ರದುರ್ಗ ಜಿಲ್ಲಾ ಬಾಲಭವನ ಅಧಿಕಾರಿ ಮಂಜುನಾಥ್ ಸ್ಥಳಕ್ಕೆ ದೌಡಾಯಿಸಿ ಪರಿಶೀಲನೆ ನಡೆಸಿದ ವೇಳೆ ಪ್ರಕರಣ ಬಯಲಾಗಿದೆ. ಹುಳಿಯಾರು ರಸ್ತೆಯ ನಿವಾಸಿ ಐಶ್ವರ್ಯ ವಿರುದ್ಧ ಹಿರಿಯೂರು ನಗರ ಠಾಣೆಯಲ್ಲಿ ಪೊಲೀಸರು ಪ್ರಕರಣ ದಾಖಲಿಸಿದ್ದಾರೆ. ಬಳಿಕ ಪ್ರಕರಣದ ಬೆನ್ನತ್ತಿದ ಪೊಲೀಸರು, ಈ ಘಟನೆಯ ಅಸಲಿ ಸತ್ಯ ಕೇಳಿ ಬೆರಗಾಗಿದ್ದಾರೆ. ಹೂವಿನಹೊಳೆ ಗ್ರಾಮದ ಚಂದ್ರಪ್ಪ ಜೊತೆ ಐಶ್ವರ್ಯ ಅಕ್ರಮ ಸಂಬಂಧ ಹೊಂದಿದ್ದಳು. ಅವರ ಅಕ್ರಮ ಆಟಕ್ಕಾಗಿ ಇಬ್ಬರೂ ಸೇರಿ ಕೊಪ್ಪಳ ಮೂಲದವರಿಗೆ ಮಗುವನ್ನು 50,000 ರೂ.ಗೆ ಮಾರಾಟ ಮಾಡಿದ್ದಾರೆಂದು ತಿಳಿದುಬಂದಿದೆ. ಈ ಮಗು ಮಾರಾಟ ಪ್ರಕರಣ ಡಿ.19ರಂದು ನಡೆದಿದ್ದು, ಆರೋಪಿ ಐಶ್ವರ್ಯಳನ್ನು ಹಿರಿಯೂರು ನಗರ ಠಾಣೆ ಪೊಲೀಸರು ವಶಕ್ಕೆ ಪಡೆದಿದ್ದಾರೆ. ಆದರೆ ಐಶ್ವರ್ಯಳ ಪ್ರಿಯಕರ, ಆರೋಪಿ ಚಂದ್ರಪ್ಪ ಪರಾರಿಯಾಗಿದ್ದಾನೆ. ಮಗು ಕೊಂಡುಕೊಂಡಿರುವ ಆರೋಪಿಗಳಿಗೆ ಖಾಕಿ ಶೋಧ ಕಾರ್ಯ ಮುಂದುವರೆಸಿದೆ. ಘಟನೆ ಸಂಬಂಧ ಹಿರಿಯೂರು ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ವಾಯುಮಾಲಿನ್ಯ ನಿಯಂತ್ರಣಕ್ಕೆ ಮಹತ್ವದ ಹೆಜ್ಜೆ: ನಗರಾದ್ಯಂತ 150ಕ್ಕೂ ಹೆಚ್ಚು ಸೆನ್ಸರ್ ಅಳವಡಿಕೆ



**ಬೆಂಗಳೂರು:** ನಗರದಲ್ಲಿ ದಿನದಿಂದ ದಿನಕ್ಕೆ ಗಾಳಿಯ ಗುಣಮಟ್ಟ ಕುಸಿಯುತ್ತಿದ್ದು, ಇದು ಸಾರ್ವಜನಿಕರ ಆರೋಗ್ಯದ ಮೇಲೆ ಗಂಭೀರ ಪರಿಣಾಮ ಬೀರುತ್ತಿದೆ. ಈ ಸಮಸ್ಯೆಯ ಮೂಲವನ್ನು ಪತ್ತೆ ಹಚ್ಚಲು ಈಗ ಗ್ರೇಟರ್ ಬೆಂಗಳೂರು ಪ್ರಾಧಿಕಾರ ಮತ್ತು ಮಾಲಿನ್ಯ ನಿಯಂತ್ರಣ ಮಂಡಳಿ ಸಜ್ಜಾಗಿವೆ. ಗರದ ಯಾವ ಭಾಗದಲ್ಲಿ ಮಾಲಿನ್ಯ ಹೆಚ್ಚಿದೆ ಮತ್ತು ಅದಕ್ಕೆ ನಿಖರವಾದ ಕಾರಣಗಳೇನು ಎಂಬುದನ್ನು ಪತ್ತೆ ಹಚ್ಚಲು ಬೆಂಗಳೂರಿನ ಪ್ರಮುಖ ಸ್ಥಳಗಳಲ್ಲಿ ಸೆನ್ಸರ್‌ಗಳನ್ನು ಅಳವಡಿಸಲು ನಿರ್ಧರಿಸಲಾಗಿದೆ. ಮೆಟ್ರೋ ನಿಲ್ದಾಣಗಳು: ಬೆಂಗಳೂರಿನಾದ್ಯಂತ ಇರುವ 85 ಮೆಟ್ರೋ ನಿಲ್ದಾಣಗಳಲ್ಲಿ ಈ ಸೆನ್ಸರ್‌ಗಳು ಇರಲಿವೆ.

ಬಿಎಂಟಿಸಿ ಟಿಟಿಎಂಸಿ: ಸುಮಾರು 55 ಬಿಎಂಟಿಸಿ ಟಿಟಿಎಂಸಿ ಕಟ್ಟಡಗಳ ಮೇಲೆ ನಿಗಾ ಇಡಲಾಗುವುದು.


ಕೈಗಾರಿಕಾ ಪ್ರದೇಶ ಮತ್ತು ರಸ್ತೆಗಳು: ಪೀಣ್ಯ, ಜಿಗಣಿಯಂತಹ ಫ್ಯಾಕ್ಟರಿ ಪ್ರದೇಶಗಳು ಮತ್ತು ಟ್ರಾಫಿಕ್ ದಟ್ಟಣೆ ಹೆಚ್ಚಿರುವ ಪ್ರಮುಖ ರಸ್ತೆಗಳಲ್ಲಿ ಸೆನ್ಸರ್ ಕಣ್ಗಾವಲು ಇರಲಿದೆ. ಮಾಲಿನ್ಯದ ಮೂಲ ಯಾವುದು ? ಗಾಳಿಯ ಗುಣಮಟ್ಟ ಕುಸಿಯಲು ಕೇವಲ ವಾಹನಗಳ ಹೊಗೆ ಮಾತ್ರ ಕಾರಣವೇ ? ಅಥವಾ ಕಟ್ಟಡ ನಿರ್ಮಾಣದ ಧೂಳು ಮತ್ತು ಅವಶೇಷಗಳೇ ? ಅಥವಾ ಕೈಗಾರಿಕೆಗಳಿಂದ ಹೊರಬರುವ ವಿಷಗಾಳಿಯೇ ? ಈ ಎಲ್ಲಾ ಪ್ರಶ್ನೆಗಳಿಗೆ ಉತ್ತರ ಕಂಡುಕೊಳ್ಳುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿದೆ.

ಆತಂಕ ಹೆಚ್ಚಿಸಿದ AQI ಮಟ್ಟ ವಾಯು ಗುಣಮಟ್ಟ ಸೂಚ್ಯಂಕ 0-50 ರ ನಡುವೆ ಇದ್ದರೆ ಅದನ್ನು ಉತ್ತಮ ಎಂದು ಪರಿಗಣಿಸಲಾಗುತ್ತದೆ. ಆದರೆ ಬೆಂಗಳೂರಿನ ಹಲವು ಭಾಗಗಳಲ್ಲಿ ಇದು ಈಗಾಗಲೇ 100ರ ಗಡಿ ದಾಟಿದೆ. ಇದು ಶ್ವಾಸಕೋಶದ ತೊಂದರೆ ಇರುವವರಿಗೆ ಮತ್ತು ಮಕ್ಕಳಿಗೆ ಅತ್ಯಂತ ಅಪಾಯಕಾರಿಯಾಗಿದೆ. ಹೆಬ್ಬಾಳ, ಜಯನಗರ, ನಿಮ್ಹಾನ್ಸ್ ಪ್ರದೇಶ, ಸೆಂಟ್ರಲ್ ಸಿಲ್ಕ್ ಬೋರ್ಡ್, ಸಿಟಿ ರೈಲ್ವೇ ನಿಲ್ದಾಣ, ಬಸವೇಶ್ವರ ನಗರ, ಜಿಗಣಿ, ಕಸ್ತೂರಿನಗರ ಮತ್ತು ಪೀಣ್ಯ.

ಈ ಭಾಗಗಳಲ್ಲಿ AQI ಮಟ್ಟ ಏರಿಕೆಯಾಗುತ್ತಲೇ ಇರುವುದು ಅಧಿಕಾರಿಗಳ ನಿದ್ದೆಗೆಡಿಸಿದೆ. ಸ್ನರ್‌ಗಳಿಂದ ಲಭ್ಯವಾಗುವ ಅಂಕಿಅಂಶಗಳ ಆಧಾರದ ಮೇಲೆ, ಮಾಲಿನ್ಯದ ಹಾಟ್‌ಸ್ಪಾಟ್‌ಗಳನ್ನು ಗುರುತಿಸಿ ಅಲ್ಲಿ ಟ್ರಾಫಿಕ್ ಡೈವರ್ಷನ್, ಹೆಚ್ಚು ಮರಗಳನ್ನು ಬೆಳೆಸುವುದು ಅಥವಾ ಕಟ್ಟಡ ನಿರ್ಮಾಣ ನಿಯಮಗಳನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸುವ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳಲಿದೆ. ಬೆಂಗಳೂರನ್ನು ಮತ್ತೆ 'ಗಾರ್ಡನ್ ಸಿಟಿ'ಯನ್ನಾಗಿ ಮಾಡಬೇಕಾದರೆ ಕೇವಲ ಸರ್ಕಾರದ ಪ್ರಯತ್ನ ಸಾಲದು, ಸಾರ್ವಜನಿಕರೂ ಕೂಡ ಪರಿಸರ ಸ್ನೇಹಿ ಸಾರಿಗೆ ಮತ್ತು ಮಾಲಿನ್ಯ ತಡೆಗೆ ಸಹಕರಿಸಬೇಕಿದೆ.

# ಅಯೋಧ್ಯೆ ರಾಮ ಮಂದಿರಕ್ಕೆ ಅಪರೂಪದ ಶ್ರೀರಾಮ ವಿಗ್ರಹ ದಾನ ಬೆಂಗಳೂರಿನ ಮಹಿಳೆಯ ಮಹತ್ವದ ಕೊಡುಗೆ

**ಬೆಂಗಳೂರು**: ಚಿನ್ನದ ಎಲೆಯ ಹಾಳೆಗಳಿಂದ ಲೇಪಿತವಾಗಿರುವ, ಮಾಣಿಕ್ಯ, ಪಚ್ಚೆ, ಹವಳ, ಮುತ್ತು ಹಾಗೂ ವಜ್ರಗಳಿಂದ ಅಲಂಕರಿಸಲಾದ ಅಪರೂಪದ ಶ್ರೀರಾಮನ ಕಲಾಕೃತಿಯೊಂದು ಅಯೋಧ್ಯೆಯ ರಾಮ ಮಂದಿರದಲ್ಲಿ ಪ್ರತಿಷ್ಠಾಪನೆಯಾಗಲು ಸಜ್ಜಾಗಿದೆ. ಈ ವಿಶಿಷ್ಟ ಕಲಾಕೃತಿಯನ್ನು ಬೆಂಗಳೂರಿನ ರಾಜಾಜಿನಗರ ನಿವಾಸಿಹವ್ಯಾಸಿ ಕಲಾವಿದೆ ಜಯಶ್ರೀ ಫಣೀಶ್ ತಮ್ಮ ಕೈಯ್ಯಾರೆ ನಿರ್ಮಿಸಿದ್ದು, ಇದರ ಸಂಪೂರ್ಣ ಹಣಕಾಸು ಸಹಾಯವನ್ನು ಅವರ ಕುಟುಂಬವೇ ಒದಗಿಸಿದೆ ಎಂದು ಅವರು ತಿಳಿಸಿದ್ದಾರೆ.




ತಂಜಾವೂರು ಚಿತ್ರಕಲೆ ಶೈಲಿಯಿಂದ ಪ್ರೇರಣೆ ಪಡೆದ ಈ ರಾಮ ಕಲಾಕೃತಿಯನ್ನು 10 ಅಡಿ ಎತ್ತರ, 6 ಅಡಿ ಅಗಲ ಮತ್ತು 2.5 ಅಡಿ ಆಳ ಹೊಂದಿರುವ ರೋಸ್‌ವುಡ್ ಚೌಕಟ್ಟಿನಲ್ಲಿ ಅಳವಡಿಸಲಾಗಿದೆ. ಇದರಲ್ಲಿ ರಾಮನ ದೈವಿಕ ರೂಪದೊಂದಿಗೆ ಹನುಮಾನ್, ಗರುಡ ಹಾಗೂ ದಶಾವತಾರದ ಚಿತ್ರಣಗಳನ್ನು ಒಳಗೊಂಡಿರುವುದು ವಿಶೇಷ. ಕಲಾಕೃತಿಯು ವಿಗ್ರಹದಂತೆ ಕಾಣುವ ತ್ರಿಮಿತೀಯ ವಿನ್ಯಾಸವನ್ನು ಹೊಂದಿದ್ದುದೆ. ಡಿಸೆಂಬರ್ 11ರಂದು ಶ್ರೀರಾಮ ಜನ್ಮಭೂಮಿ ತೀರ್ಥಕ್ಷೇತ್ರ ಟ್ರಸ್ಟ್‌ನಿಂದ ದೃಢೀಕರಣ ಪತ್ರವನ್ನು ಸ್ವೀಕರಿಸಿದ ನಂತರ, ಜಯಶ್ರೀ ಫಣೀಶ್ ಅವರ ಮನೆಗೆ ಕಲಾಕೃತಿಯನ್ನು ವೀಕ್ಷಿಸಲು ನಿರಂತರವಾಗಿ ಭಕ್ತರು ಮತ್ತು ಕಲಾಭಿಮಾನಿಗಳ ದಂಡೇ ಹರಿದು ಬಂದಿದೆ. ಕಲಾಕೃತಿ ಸ್ವೀಕಾರವಾದ ಸುದ್ದಿ ತಿಳಿದ ಕೂಡಲೇ,

ರಾಜಾಜಿನಗರದಲ್ಲಿರುವ ಅವರ ಮನೆ ಭಕ್ತರ ದರ್ಶನ ಕೇಂದ್ರತಾಯಿತು. ಕೆಲವರು ಕೇವಲ ದರ್ಶನಕ್ಕಾಗಿ ಬಂದರೆ, ಇನ್ನು ಕೆಲವರು ಭಜನೆ, ನೃತ್ಯ ಮತ್ತು ಇತರೆ ಕಾರ್ಯಕ್ರಮಗಳನ್ನು ಆಯೋಜಿಸುತ್ತಿದ್ದರು. 50 ವರ್ಷದ ಜಯಶ್ರೀ ಫಣೀಶ್ ಅವರು ತಂಜಾವೂರು ವರ್ಣಚಿತ್ರಗಳಲ್ಲಿ ಪರಿಣತಿ ಹೊಂದಿದ್ದು, ಕಳೆದ ಹತ್ತು ವರ್ಷಗಳಲ್ಲಿ ತಮ್ಮ 10 ಕಲಾಕೃತಿಗಳನ್ನು ವಿವಿಧ ದೇವಾಲಯಗಳಿಗೆ ದಾನ ಮಾಡಿದ್ದಾರೆ. ಹಾಸನ ಜಿಲ್ಲೆಯ ದೊಡ್ಡಮಗ್ಗೆ ಗ್ರಾಮದ ದೇವಾಲಯವೊಂದರಲ್ಲಿ ವರ್ಣಚಿತ್ರವನ್ನು ಸಮರ್ಪಿಸುವ ಸಂದರ್ಭದಲ್ಲಿ, ಅಯೋಧ್ಯೆಯ ಕೇಂದ್ರ ದೇವತೆಯಾದ ಬಾಲರಾಮನ ಕಲಾಕೃತಿಯನ್ನು ನಿರ್ಮಿಸುವ ಆಸೆಯನ್ನು ಅವರು ಮೊದಲ ಬಾರಿಗೆ ವ್ಯಕ್ತಪಡಿಸಿದ್ದರು.

ಈ ಆಲೋಚನೆಯೇ ಮುಂದಾಗಿ, ಬೆಂಗಳೂರಿನ ಉದ್ಯಮಿ ಜಿ.ಕೆ. ಪ್ರಮೋದ್ ಸೇರಿದಂತೆ ಕೆಲವರು ದೇವಾಲಯದ ಅಧಿಕಾರಿಗಳನ್ನು ಸಂಪರ್ಕಿಸಲು ನೆರವಾದರು. ಈ ಮಹತ್ವಾಕಾಂಕ್ಷಿ ಕಲಾಕೃತಿಯನ್ನು ಪೂರ್ಣಗೊಳಿಸಲು ಜಯಶ್ರೀ ಅವರಿಗೆ ಒಂಬತ್ತು ತಿಂಗಳುಗಳ ಕಾಲ, ಅಂದಾಜು 2,800 ಗಂಟೆಗಳ ಶ್ರಮ ಬೇಕಾಯಿತು. ಥರ್ಮೋಕೋಲ್‌ನ ಮೂಲ ರಚನೆಯಿಂದ ಆರಂಭಿಸಿ, ಜೇಡಿಮಣ್ಣಿನ ಪದರ ಹಾಕಿ, ನಂತರ ಚಿನ್ನದ ಎಲೆಯ ಹಾಳೆಗಳಿಂದ ಅಂತಿಮ ಸ್ಪರ್ಶ ನೀಡಲಾಗಿದೆ. ಇದು ಜಯಶ್ರೀ ಅವರ ವಿಗ್ರಹದಂತಿರುವ ಕಲಾಕೃತಿಯ ಮೊದಲ ಪ್ರಯತ್ನವಾಗಿದ್ದು, ಅದರಲ್ಲೂ ರಾಮನ ಮುಖವನ್ನು ಕೆತ್ತುವುದು ಅತ್ಯಂತ ಸವಾಲಿನ ಭಾಗವಾಗಿತ್ತು. ಅದಕ್ಕೆ ಐದು ದಿನಗಳ ಕಾಲ ತೀವ್ರ ಪರಿಶ್ರಮ ಬೇಕಾಯಿತು.

# ಭ್ರಷ್ಟ ಅಧಿಕಾರಿಗಳ ಮನೆಯಲ್ಲಿ ಕೋಟಿ ಕೋಟಿ ಹಣ, ಕೆಜಿಗಟ್ಟಲೆ ಚಿನ್ನ ಪತ್ತೆ



**ಬೆಂಗಳೂರು:** ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಅಧಿಕಾರಿಗಳ ವಿರುದ್ಧ ಸಮರ ಸಾರಿರುವ ಲೋಕಾಯುಕ್ತ ಪೊಲೀಸರು ಏಕಕಾಲಕ್ಕೆ ಹಲವು ಕಡೆ ದಾಳಿ ನಡೆಸಿದ್ದಾರೆ. ಜನರಿಂದ ಲಂಚ ಪಡೆದು, ಸರ್ಕಾರಕ್ಕೆ ವಂಚಿಸಿ ಅಕ್ರಮವಾಗಿ ಗಳಿಸಿದ ಕೋಟಿ ಕೋಟಿ ಮೌಲ್ಯದ ಆಸ್ತಿಯನ್ನು ಅಧಿಕಾರಿಗಳು ಪತ್ತೆ ಹಚ್ಚಿದ್ದಾರೆ. ಪ್ರಮುಖವಾಗಿ ಈ ನಾಲ್ವರ ಆಸ್ತಿ ಗಳಿಕೆಯನ್ನ ನೋಡಿ ಅಧಿಕಾರಿಗಳೇ ಶಾಕ್ ಆಗಿದ್ದಾರೆ.

ಮಾರುತಿ ಯಶ್ವಂತ್ ಮಾಳ್ (ಸಿಇಒ, ಸಿದ್ದಾಪುರ): ಅಧಿಕಾರಿಗಳು ನಡೆಸಿದ ದಾಳಿಯಲ್ಲಿ ಸಿದ್ದಾಪುರದ ಕೋಲ್ಸಿರಸಿ ಸಹಕಾರ ಸಂಘದ ಮುಖ್ಯಕಾರ್ಯ ನಿರ್ವಹಣಾಧಿಕಾರಿ ಮಾರುತಿ ಯಶ್ವಂತ್ ಮಾಳ್ ಅವರ ಬಳಿ ಅತೀ ಹೆಚ್ಚು ಅಕ್ರಮ ಆಸ್ತಿ ಪತ್ತೆಯಾಗಿದೆ. 7 ನಿವೇಶನಗಳು, 4 ಬೃಹತ್ ವಾಸದ ಮನೆಗಳು ಹಾಗೂ ಒಂದು ವಾಣಿಜ್ಯ ಸಂಕೀರ್ಣ ಪತ್ತೆಯಾಗಿದೆ. ಇವುಗಳ ಮೌಲ್ಯವೇ ಸುಮಾರು 9.17 ಕೋಟಿ ರೂ.ಗಳಿಗೂ ಅಧಿಕ ಸ್ಥಿರಾಸ್ತಿ ಪತ್ತೆಯಾಗಿದೆ. ಹಾಗೂ 62 ಲಕ್ಷ ರೂ. ಮೌಲ್ಯದ ಐಷಾರಾಮಿ ವಾಹನಗಳು ಹಾಗೂ ಲಕ್ಷಾಂತರ ರೂ. ಮೌಲ್ಯದ ಚರಾಸ್ತಿ ಪತ್ತೆಯಾಗಿದೆ. ಒಟ್ಟಾರೆ ಬರೋಬ್ಬರಿ 9.89 ಕೋಟಿ ರೂಪಾಯಿ ಇವರ ಬಳಿ ಸಿಕ್ಕಿರುವುದಾಗಿ ತಿಳಿದುಬಂದಿದೆ. ಡಿ. ವಿಜಯಲಕ್ಷ್ಮೀ (ಎಇಇ, ರಾಯಚೂರು): ರಾಯಚೂರಿನ ಸಿಂಧನೂರು ಉಪ ವಿಭಾಗದ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಎಇಇ ವಿಜಯಲಕ್ಷ್ಮೀ ಅವರ ಆಸ್ತಿಗಳು ಈ ಕೆಳಗಿನಂತೆ ಇವೆ. ಇವರು ಕೇವಲ ನಿವೇಶನಗಳನ್ನಷ್ಟೇ ಅಲ್ಲದೆ, ಬರೋಬ್ಬರಿ 73 ಎಕರೆ 31 ಗುಂಟೆ ಕೃಷಿ ಜಮೀನನ್ನು ಹೊಂದಿದ್ದಾರೆ. 12 ನಿವೇಶನ ಮತ್ತು 2 ಮನೆಗಳು ಇವರ ಹೆಸರಿನಲ್ಲಿವೆ. ಇವರ ಬಳಿ ಸಿಕ್ಕ ಒಟ್ಟು ಆಸ್ತಿ ಮೌಲ್ಯ 4.09 ಕೋಟಿ ರೂಪಾಯಿಯಾಗಿದೆ.

ಮಲ್ಲಪ್ಪ ಹನಮಂತಪ್ಪ ಯರಜರಿ (ಕೃಷಿ ಇಲಾಖೆ, ವಿಜಯಪುರ): ಬಸವನಬಾಗೇವಾಡಿಯ ಕೃಷಿ ಇಲಾಖೆಯ ಸಹಾಯಕ ನಿರ್ದೇಶಕರಾದ ಇವರ ಬಳಿ ಭಾರೀ ಪ್ರಮಾಣದ ನಗದು ಮತ್ತು ಚಿನ್ನ ಪತ್ತೆಯಾಗಿದೆ. 14.42 ಲಕ್ಷ ರೂ. ನಗದು, ಬರೋಬ್ಬರಿ 86.47 ಲಕ್ಷ ರೂ. ಮೌಲ್ಯದ ಚಿನ್ನಾಭರಣಗಳು ಹಾಗೂ 21 ಲಕ್ಷ ರೂ. ಮೌಲ್ಯದ ವಾಹನಗಳು ಪತ್ತೆಯಾಗಿವೆ. ಜೊತೆಗೆ 20 ಎಕರೆ ಕೃಷಿ ಭೂಮಿಯನ್ನೂ ಇವರು ಹೊಂದಿದ್ದಾರೆ. ಇವತ ಬಳಿ ಒಟ್ಟು ಸುಮಾರು 3.17 ಕೋಟಿ ರೂಪಾಯಿ ಪತ್ತೆಯಾಗಿದೆ.

ಶ್ಯಾಮಸುಂದರ್ ಮಾರುತಿ ಕಾಂಬ್ಳೆ (ಬಾಗಲಕೋಟೆ ಜಿಲ್ಲಾ ಪಂಚಾಯಿತಿ) ಬಾಗಲಕೋಟೆ ಜಿ.ಪಂ. ಸಹಾಯಕ ಕಾರ್ಯದರ್ಶಿಯಾಗಿರುವ ಇವರಿಗೆ ಸಂಬಂಧಿಸಿದ ಮನೆ ಹಾಗೂ ಕಚೇರಿಯ ಮೇಲೂ ಲೋಕಾಯುಕ್ತ ದಾಳಿ ನಡೆಸಿದೆ. ಇವರು 15 ನಿವೇಶನ ಮತ್ತು 3 ಮನೆಗಳನ್ನು ಹೊಂದಿದ್ದಾರೆ. ಸುಮಾರು 2.04 ಕೋಟಿ ರೂಪಾಯಿ ಮೌಲ್ಯದ ಅಕ್ರಮ ಆಸ್ತಿಯನ್ನು ಲೋಕಾಯುಕ್ತ ಪೊಲೀಸರು ಪತ್ತೆ ಹಚ್ಚಿದ್ದಾರೆ. ಸರ್ಕಾರಿ ಹುದ್ದೆಯಲ್ಲಿದ್ದುಕೊಂಡು ಸಾರ್ವಜನಿಕರ ಸೇವೆಯ ಬದಲು ಸ್ವಂತ ಆಸ್ತಿ ಹೆಚ್ಚಿಸಿಕೊಳ್ಳುವುದರಲ್ಲೇ ನಿರತರಾಗಿದ್ದ ಈ ಅಧಿಕಾರಿಗಳ ವಿರುದ್ಧ ಲೋಕಾಯುಕ್ತ ತನಿಖೆ ತೀವ್ರಗೊಂಡಿದೆ.

# ರಷ್ಯಾದಿಂದ ದುಬೈಗೆ ಬಂದು ಮಾಜಿ ಪತ್ನಿ ಬರ್ಬರ ಹತ್ಯೆ

ಮಾಸ್ಕೋ: ಎಸ್ಕಾರ್ಟ್ ಆಗಿ ಕೆಲಸ ಮಾಡುತ್ತಿದ್ದಾಳೆಂದು ಶಂಕಿಸಿ ರಷ್ಯಾದ ವ್ಯಕ್ತಿಯೊಬ್ಬ ತನ್ನ ಮಾಜಿ ಪತ್ನಿಯನ್ನು ಹತ್ಯೆ ಮಾಡಿರುವ ಘಟನೆ ನಡೆದಿದೆ. ದುಬೈನ ವೊಕೊ ಬೊನಿಂಗ್ಟನ್ ಹೋಟೆಲ್‌ನಲ್ಲಿ ಅನಸ್ತಾಸಿಯಾ (25) ಹತ್ಯೆಯಾದ ಮಹಿಳೆ. ಕುತ್ತಿಗೆ, ತಲೆ ಮತ್ತು ಕೈಕಾಲುಗಳಿಗೆ 15 ಬಾರಿ ಇರಿದು ಮಾಜಿ ಪತ್ನಿಯನ್ನು ಹತ್ಯೆ ಮಾಡಿದ್ದಾನೆ.

ಆರೋಪಿಯನ್ನು ಪೊಲೀಸರು ಬಂಧಿಸಿದ್ದಾರೆ ಆರೋಪಿ ಆಲ್ಬರ್ಟ್ ಮಾರ್ಗನ್ (41) ಕೊಲೆ ಆರೋಪಿ. ಕಾನೂನು ಸಲಹೆಗಾರನಾದ ಮಾರ್ಗನ್, ರಷ್ಯಾದ ವಿಮಾನಯಾನ ಸಂಸ್ಥೆ ಪೊಬೆಡಾದಲ್ಲಿ ಕೆಲಸ ಮಾಡುತ್ತಿದ್ದ ಅನಸ್ತಾಸಿಯಾಳನ್ನು ಎರಡು ವರ್ಷಗಳ ಹಿಂದೆ ವಿವಾಹವಾಗಿದ್ದ.

ನಂತರ ಆಕೆಯಿಂದ ಬೇರ್ಪಟ್ಟಿದ್ದ. ಮಾರ್ಗನ್ ತನ್ನ ಮಾಜಿ ಪತ್ನಿಯ ಖಾಸಗಿ ಸಂದೇಶಗಳನ್ನು ಪರಿಶೀಲಿಸಿದ್ದ. ವಿಮಾನ ಸಿಬ್ಬಂದಿಯಾಗಿದ್ದ ಆಕೆ ಎಸ್ಕಾರ್ಟ್ ಆಗಿ ಕೆಲಸ ಮಾಡುತ್ತಿದ್ದಾಳೆಂದು ತಿಳಿದು,

ಸುದ್ದಿ ಹಾಗೂ ಜಾಹೀರಾತುಗಳಿಗೆ ಸಂಪರ್ಕಿಸಿ
:9538786812/9880065534

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.